ಸಂಪುಟ: 11 ಸಂಚಿಕೆ: 202 ಪುಟಗಳು: 4+2 ಬೆಲೆ: ₹ 3.00 ಬುಧವಾರ, ಸೆಪ್ಟೆಂಬರ್ 16, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 202 Pages : 4+2 Rate : 3.00 Wednesday, September 16, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## ರಾಷ್ಟ್ರೀಯ ಶೂಟಿಂಗ್‌ನಲ್ಲಿ ರಿಯಾನ್‌ಗೆ ತ್ರಿವಳಿ ಚಿನ್ನ




**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗುರುದೇವ್ಸ್ ಜೆಜಿ ಪಿಯು ಕಾಲೇಜಿನ ವಿದ್ಯಾರ್ಥಿ ರಿಯಾನ್ ಅಹಮದ್ ರಾಷ್ಟ್ರೀಯ ಮಟ್ಟದ 10 ಮೀಟರ್ ಏರ್ ಪಿಸ್ತೂಲ್ ಶೂಟಿಂಗ್ ಸ್ಪರ್ಧೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿ ಗದಗ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಕೇರಳದ ತಿರುವನಂತಪುರದ ಇಂಟರ್‌ನ್ಯಾಷನಲ್ ಶೂಟಿಂಗ್ ಅಕಾಡೆಮಿಯಲ್ಲಿ ನಡೆದ ಸ್ಪರ್ಧೆಯಲ್ಲಿ ಆಂಧ್ರಪ್ರದೇಶ, ಕರ್ನಾಟಕ, ತೆಲಂಗಾಣ, ತಮಿಳುನಾಡು, ಕೇರಳ, ಮಹಾರಾಷ್ಟ್ರ ಹಾಗೂ ಗೋವಾ ರಾಜ್ಯಗಳ ಸ್ಪರ್ಧಿಗಳು ಭಾಗವಹಿಸಿದ್ದರು. ರಿಯಾನ್ ಅವರ ಸಾಧನೆಗೆ ಗುರುದೇವ್ಸ್ ಜೆಜಿ ಪಿಯು ಕಾಲೇಜಿನ ಆಡಳಿತ ಮಂಡಳಿ, ಪ್ರಾಂಶುಪಾಲರು, ಉಪನ್ಯಾಸಕರು ಹಾಗೂ ಸಿಬ್ಬಂದಿ ಅಭಿನಂದನೆ ಸಲ್ಲಿಸಿದ್ದು, ಮುಂದಿನ ದಿನಗಳಲ್ಲಿ ರಾಷ್ಟ್ರಮಟ್ಟದಿಂದ ಅಂತಾರಾಷ್ಟ್ರೀಯ ಮಟ್ಟದ ಸ್ಪರ್ಧೆಗಳಲ್ಲಿ ದೇಶವನ್ನು ಪ್ರತಿನಿಧಿಸಿ ಯಶಸ್ಸು ಗಳಿಸಲಿ ಎಂದು ಹಾರೈಸಿದ್ದಾರೆ.

## ಅಹಿಂದ ಧ್ವನಿ ಅಡಗಿಸಲು ಇಡಿ ದಾಳಿ: ಸಂಗನಗೌಡ ಪಾಟೀಲ

**ವಿಜಯಸಾಕ್ಷಿ ಸುದ್ದಿ, ಡಂಬಳ**



ಅಹಿಂದ ವರ್ಗಗಳ ಪ್ರಬಲ ಧ್ವನಿಯಾಗಿರುವ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹಾಗೂ ಅವರ ಕುಟುಂಬಸ್ಥರ ನಿವಾಸಗಳ ಮೇಲೆ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ದಾಳಿ ನಡೆಸಿರುವುದು ರಾಜಕೀಯ ಪ್ರೇರಿತ ಕ್ರಮವಾಗಿದೆ ಎಂದು ರೋಣ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ (ಮಿಥುನ) ಜಿ. ಪಾಟೀಲ ಆರೋಪಿಸಿದರು. ಡಂಬಳ ಹೋಬಳಿಯ ಹಿರೇವಡ್ಡಟ್ಟಿ ಗ್ರಾಮದಲ್ಲಿ ಮಾತನಾಡಿದ ಅವರು, ಬಿಜೆಪಿಯಲ್ಲಿ ಭ್ರಷ್ಟಾಚಾರ ನಡೆಸಿದವರು ಯಾರೂ ಇಲ್ಲವೇ? ಅಹಿಂದ ವರ್ಗಗಳ ಧ್ವನಿಯಾಗಿರುವ ಸತೀಶ್ ಜಾರಕಿಹೊಳಿ ಅವರನ್ನು ಮಾತ್ರ ಏಕೆ ಟಾರ್ಗೆಟ್ ಮಾಡಲಾಗುತ್ತಿದೆ? ಎಂದು ಪ್ರಶ್ನಿಸಿದರು. ಸತೀಶ್ ಜಾರಕಿಹೊಳಿ ಅವರ ರಾಜಕೀಯ ಬೆಳವಣಿಗೆಯನ್ನು ಸಹಿಸಲಾಗದೆ ಬಿಜೆಪಿ ಇಡಿ ಹಾಗೂ ಆದಾಯ ತೆರಿಗೆ (ಐಟಿ) ಸಂಸ್ಥೆಗಳನ್ನು ಬಳಸಿಕೊಂಡು ದಾಳಿ ನಡೆಸುತ್ತಿದೆ ಎಂದು ಆರೋಪಿಸಿದರು, ನಮ್ಮ ನಾಯಕರು ಕಾನೂನುಬದ್ಧವಾಗಿಯೇ ವ್ಯಾಪಾರ ವಹಿವಾಟು ನಡೆಸುತ್ತಿದ್ದಾರೆ. ತನಿಖೆಗೆ ಮುಂದಾಗಿರುವ ಇಡಿ ಹಾಗೂ ಐಟಿ ಅಧಿಕಾರಿಗಳಿಗೆ ಅಗತ್ಯ ದಾಖಲೆಗಳನ್ನು ನೀಡಿ ಕಾನೂನುಬದ್ಧವಾಗಿ ಉತ್ತರಿಸಲಿದ್ದಾರೆ. ತನಿಖೆ ಪೂರ್ಣಗೊಂಡ ಬಳಿಕ ಸತ್ಯಾಸತ್ಯತೆ ಹೊರಬರಲಿದೆ" ಎಂದು ಸಂಗನಗೌಡ ಪಾಟೀಲ ಹೇಳಿದರು.

ಸತೀಶ್ ಜಾರಕಿಹೊಳಿ ಅವರು ಪರಿಶಿಷ್ಟ ಪಂಗಡ (ಎಸ್‌ಟಿ) ಸಮುದಾಯದ ಪ್ರಭಾವಿ ನಾಯಕರಾಗಿದ್ದು, ಅಹಿಂದ ವರ್ಗಗಳ ಪರವಾಗಿ ಧ್ವನಿ ಎತ್ತುತ್ತಿದ್ದಾರೆ. ಅವರ ರಾಜಕೀಯ ಪ್ರಭಾವವನ್ನು ಕುಗ್ಗಿಸುವ ಉದ್ದೇಶದಿಂದಲೇ ದಾಳಿ ನಡೆಸಲಾಗಿದೆ ಎಂಬ ಅನುಮಾನ ಮೂಡುತ್ತಿದೆ ಎಂದು ಅವರು ಆರೋಪಿಸಿದರು. ಕೇಂದ್ರ ತನಿಖಾ ಸಂಸ್ಥೆಗಳನ್ನು ಬಳಸಿಕೊಂಡು ವಿರೋಧ ಪಕ್ಷದ ನಾಯಕರನ್ನು ಗುರಿಯಾಗಿಸುವ ಪ್ರವೃತ್ತಿ ಪ್ರಜಾಪ್ರಭುತ್ವ ವ್ಯವಸ್ಥೆಗೆ ಆರೋಗ್ಯಕರವಲ್ಲ. ರಾಜಕೀಯ ವಿರೋಧಿಗಳನ್ನು

> ಸುಳ್ಳು ವದಂತಿಗಳಿಗೆ ಯಾರೂ ಕಿವಿಗೊಡಬಾರದು. ತನಿಖೆ ಬಳಿಕ ಸತ್ಯ ಹೊರಬರಲಿದೆ. ಮುಂದಿನ ದಿನಗಳಲ್ಲಿ ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ರಾಜ್ಯದ ಜನತೆ ತಕ್ಕ ಉತ್ತರ ನೀಡಲಿದ್ದಾರೆ.
> – ಸಂಗನಗೌಡ ಪಾಟೀಲ

## ಸಂವಿಧಾನ ರಕ್ಷಣೆ ಪ್ರತಿಯೊಬ್ಬರ ಕರ್ತವ್ಯ: ಎಚ್.ಕೆ. ಪಾಟೀಲ

# ಮತದಾನವೇ ಪ್ರಜಾಪ್ರಭುತ್ವದ ಶಕ್ತಿ

**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಜಾಪ್ರಭುತ್ವದ ರಕ್ಷಣೆಗೆ ಮತದಾನದ ಹಕ್ಕು ಪ್ರಬಲ ಅಸ್ತ್ರವಾಗಿದೆ. ಮತದಾನದ ಹಕ್ಕು ಉಳಿದರೆ ಮಾತ್ರ ಪ್ರಜಾಪ್ರಭುತ್ವ ಬಲಿಷ್ಠವಾಗುತ್ತದೆ. ಸಂವಿಧಾನದ ರಕ್ಷಣೆ ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಶಾಸಕ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದಲ್ಲಿ ಆಯೋಜಿಸಿದ್ದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಸಂವಿಧಾನದ ಪೀಠಿಕೆಯ ಆಶಯದಂತೆ ಪ್ರತಿಯೊಬ್ಬರೂ ಬದುಕಬೇಕು.

ಎಲ್ಲರಿಗೂ ಸಮಾನ ಅವಕಾಶ ಹಾಗೂ ಸ್ಥಾನಮಾನ ದೊರೆಯಬೇಕು. ಪ್ರಜಾಪ್ರಭುತ್ವದ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಆಚರಿಸಲಾಗುತ್ತಿದೆ ಎಂದರು.

ದೇಶದಲ್ಲಿ ಬಡತನ ನಿರ್ಮೂಲನೆಗೆ ಸಾಕಷ್ಟು ಪ್ರಗತಿ ಸಾಧಿಸಿದ್ದರೂ ಅಸ್ಪೃಶ್ಯತೆಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಾಗಿಲ್ಲ. ಈ ನಿಟ್ಟಿನಲ್ಲಿ ಸಾಮಾಜಿಕ ಸಮಾನತೆಗಾಗಿ ಇನ್ನಷ್ಟು ಪರಿಣಾಮಕಾರಿ ಪ್ರಯತ್ನಗಳು ನಡೆಯಬೇಕು ಎಂದು ಹೇಳಿದರು.



ಸರ್ಕಾರ ಜಗಜ್ಯೋತಿ ಬಸವಣ್ಣ ಅವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದೆ.

ಬಸವಣ್ಣನವರ ಅನುಭವ ಮಂಟಪವನ್ನು ಮೊದಲ ಸಂಸತ್ತು ಎಂದು ಪರಿಗಣಿಸಬಹುದು. ಅನುಭವ ಮಂಟಪದ ಆಶಯಗಳು ಹಾಗೂ ಸಂವಿಧಾನದ ಮೌಲ್ಯಗಳಲ್ಲಿ ಸಾಮ್ಯತೆ ಕಾಣಬಹುದು.

ಸಂವಿಧಾನದ ಆಶಯಗಳನ್ನು ಗೌರವಿಸಿ ಪಾಲಿಸುವುದರಿಂದಲೇ ದೇಶ ಬಲಿಷ್ಠ ಪ್ರಜಾಪ್ರಭುತ್ವ ರಾಷ್ಟ್ರವಾಗಿ ಬೆಳೆಯಲು ಸಾಧ್ಯವಾಗಿದೆ ಎಂದು ಎಚ್.ಕೆ. ಪಾಟೀಲ ಹೇಳಿದರು.

ಸಹಾಯಕ ಕಾನೂನು ನೆರವು ಅಭಿರಕ್ಷಕ ಗುರುರಾಜ ಗೌರಿ ಉಪನ್ಯಾಸ ನೀಡಿ, ಪ್ರಜಾಪ್ರಭುತ್ವ ಕೇವಲ ಆಡಳಿತ ವ್ಯವಸ್ಥೆಯಲ್ಲ; ಅದೊಂದು ಜೀವನ ವಿಧಾನವಾಗಿದೆ. ಪ್ರಜಾಪ್ರಭುತ್ವವನ್ನು ಕೇವಲ ಮೇಲ್ನೋಟಕ್ಕೆ ನೋಡುವುದಲ್ಲ, ಅದರ ಮೌಲ್ಯಗಳನ್ನು ಜೀವನದಲ್ಲಿ ಅನುಭವಿಸಿ ಅನುಸರಿಸಬೇಕು ಎಂದರು. ಪ್ರಜಾಪ್ರಭುತ್ವ ದಿನಾಚರಣೆಯ ಹಿನ್ನೆಲೆಯಲ್ಲಿ ನೆಲ್ಸನ್ ಮಂಡೇಲಾ ಅವರ ಕೊಡುಗೆಯನ್ನು ಸ್ಮರಿಸಬೇಕು.

ಸಂವಿಧಾನ ರಚನೆಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಅದ್ಭುತ ಪ್ರತಿಭೆ ಹಾಗೂ ದೂರದೃಷ್ಟಿಯನ್ನು ಪ್ರತಿಯೊಬ್ಬರೂ ಅರಿಯಬೇಕು. ಸಂವಿಧಾನ ರಚನಾ ಚರ್ಚೆಗಳಿಗೆ ಸಂಬಂಧಿಸಿದ ಪುಸ್ತಕಗಳನ್ನು ಓದಬೇಕು. ಕಾನೂನುಗಳ ಸಮರ್ಪಕ ಅನುಷ್ಠಾನವಾಗಬೇಕು; ಅವುಗಳ ದುರುಪಯೋಗವಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಭಿತ್ತಿಪತ್ರ ಬಿಡುಗಡೆ ಮಾಡಲಾಯಿತು. ಷರೀಫ್ ಬಿಳಿಯಲಿ ಹಾಗೂ ಸಂಗಡಿಗರು ಸಂವಿಧಾನದ ಕುರಿತು ಗೀತೆಗಳನ್ನು ಪ್ರಸ್ತುತಪಡಿಸಿದರು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಸಂವಿಧಾನದ ಪ್ರಸ್ತಾವನೆಯನ್ನು ಬೋಧಿಸಿದರು.

ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮುಕುಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್., ಆರ್‌ಡಿಪಿಆರ್ ವಿಶ್ವವಿದ್ಯಾಲಯದ ಕುಲಸಚಿವ ಡಾ. ಅಮರೇಶ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಎಸ್.ಜಿ. ಪಲ್ಲೇದ, ಎಸ್.ಎನ್. ಬಳ್ಳಾರಿ, ಆದಪ್ಪನವರ, ಬಸವರಾಜ ಕಡೆಮನಿ, ಆನಂದ ಸಿಂಗಾಡೆ, ಮಾರ್ತಾಂಡ ಹಾದಿಮನಿ, ಪ್ರೊ. ಕೆ.ಎಚ್. ಬೇಲೂರ ಸೇರಿದಂತೆ ಜಿಲ್ಲಾ ಜಾಗೃತ ಸಮಿತಿಯ ನಾಮನಿರ್ದೇಶಿತ ಸದಸ್ಯರು, ನಗರಸಭೆ ಸದಸ್ಯರು, ಸಫಾಯಿ ಕರ್ಮಚಾರಿ ನಾಮನಿರ್ದೇಶಿತ ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> ಮತದಾನದ ಹಕ್ಕು ಉಳಿದರೆ ಮಾತ್ರ ಪ್ರಜಾಪ್ರಭುತ್ವ ಬಲಿಷ್ಠವಾಗುತ್ತದೆ. ಸಂವಿಧಾನವನ್ನು ಗೌರವಿಸುವುದು ಮತ್ತು ರಕ್ಷಿಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ.
> – ಡಾ. ಎಚ್.ಕೆ. ಪಾಟೀಲ, ಶಾಸಕ

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಸ್ವಾಗತಿಸಿದರು. ಪ್ರೊ. ಬಾಹುಬಲಿ ಜೈನರ್ ಹಾಗೂ ನಂದಿತಾ ಹಂಪಿಹೊಳಿ ನಿರೂಪಿಸಿದರು. ಕಾರ್ಯಕ್ರಮಕ್ಕೂ ಮುನ್ನ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕುರಿತು ಬಿಡಿಸಲಾಗಿದ್ದ ರಂಗೋಲಿ ಗಮನ ಸೆಳೆಯಿತು.

## ಎಲ್ಲ ಧರ್ಮಗಳ ಹಬ್ಬಕ್ಕೂ ಒಂದೇ ನಿಯಮ ಇರಲಿ: ಸಿ.ಸಿ. ಪಾಟೀಲ

# ಗಣೇಶೋತ್ಸವಕ್ಕೆ ಮಾತ್ರ 'ಪೊಲೀಸ್ ಗಿರಿ' ಏಕೆ?



**ವಿಜಯಸಾಕ್ಷಿ ಸುದ್ದಿ, ಗದಗ**

ಗಣೇಶೋತ್ಸವ ಸೇರಿದಂತೆ ಹಿಂದೂಗಳ ಹಬ್ಬಗಳ ಆಚರಣೆಗೆ ಅನಗತ್ಯ ನಿರ್ಬಂಧ ವಿಧಿಸುವುದು, ಧ್ವನಿವರ್ಧಕ, ಪಟಾಕಿ ಹಾಗೂ ಮೆರವಣಿಗೆ ವಿಚಾರದಲ್ಲಿ ತಾರತಮ್ಯ ಮಾಡುವುದು ಸರಿಯಲ್ಲ ಎಂದು ಮಾಜಿ ಸಚಿವ, ಶಾಸಕ ಸಿ.ಸಿ. ಪಾಟೀಲ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗಣೇಶೋತ್ಸವ ಬಂದಾಗ ಮಾತ್ರ ಪೊಲೀಸರು ವಿವಿಧ ಷರತ್ತುಗಳನ್ನು ವಿಧಿಸುತ್ತಾರೆ. ಇತರ ಸಮುದಾಯಗಳ ಹಬ್ಬಗಳಲ್ಲಿ ಡಿಜೆ, ಬೆಳಕು ಹಾಗೂ ಪೆಂಡಾಲ್‌ಗಳಿಗೆ ಅನುಮತಿ ನೀಡಲಾಗುತ್ತದೆ. ಹೀಗಿರುವಾಗ ಹಿಂದೂಗಳ ಹಬ್ಬಗಳಿಗೆ ಮಾತ್ರ ಹೆಚ್ಚಿನ ನಿಯಮ ಏಕೆ? ಎಲ್ಲ ಧರ್ಮಗಳ ಹಬ್ಬಗಳಿಗೂ ಒಂದೇ ರೀತಿಯ ನಿಯಮ ಅನ್ವಯಿಸಬೇಕು ಎಂದು ಒತ್ತಾಯಿಸಿದರು.

ಪರಿಸರ ಮಾಲಿನ್ಯದ ಹೆಸರಿನಲ್ಲಿ ಗಣೇಶೋತ್ಸವದ ವೇಳೆ ಪಟಾಕಿ ಸಿಡಿಸುವುದಕ್ಕೆ ವಿರೋಧ ವ್ಯಕ್ತಪಡಿಸಲಾಗುತ್ತದೆ. ಆದರೆ ಮಾಲಿನ್ಯಕ್ಕೆ ಕಾರಣವಾಗುವ ಕೈಗಾರಿಕೆಗಳ ವಿಚಾರದಲ್ಲಿ ಇದೇ ರೀತಿಯ ಕಾಳಜಿ ಏಕೆ ತೋರುವುದಿಲ್ಲ ಎಂದು ಪ್ರಶ್ನಿಸಿದರು.

### ಬರ ಘೋಷಣೆಗೆ ಸೆ.೨೩ರ ನಿರೀಕ್ಷೆ

ಗದಗ ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸುವ ವಿಚಾರದಲ್ಲಿ ಆಶಾಭಾವನೆ ಹೊಂದಿದ್ದೇವೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜಿಲ್ಲೆಗೆ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಅವರೂ ಎಲ್ಲ ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಲು ಪ್ರಯತ್ನಿಸುವುದಾಗಿ ತಿಳಿಸಿದ್ದಾರೆ. ವಿಧಾನಮಂಡಲ ಅಧಿವೇಶನದಲ್ಲಿ ಬರ ಪರಿಸ್ಥಿತಿ ಕುರಿತು ಚರ್ಚೆಯಾಗಲಿದ್ದು, ಸೆ.23ರಂದು ಬರ ಘೋಷಣೆಯಾಗುವ ನಿರೀಕ್ಷೆಯಿದೆ ಎಂದು ಸಿ.ಸಿ. ಪಾಟೀಲ ಹೇಳಿದರು.

ಗದಗ ಜಿಲ್ಲೆಯಲ್ಲಿ ಎಲ್ಲ ಧರ್ಮಗಳ ಹಬ್ಬಗಳನ್ನು ಶಾಂತಿ ಮತ್ತು ಸೌಹಾರ್ದದಿಂದ ಆಚರಿಸುವ ಪರಂಪರೆಯಿದ್ದು, ಅದನ್ನು ಮುಂದುವರಿಸಬೇಕು ಎಂದರು.

ಟಿ. ನರಸೀಪುರದ ಹಿಂದೂ ಕಾರ್ಯಕರ್ತರ ಕುರಿತು ಪೊಲೀಸ್ ಅಧಿಕಾರಿಯೊಬ್ಬರು ನೀಡಿರುವ ಹೇಳಿಕೆ ಹಾಗೂ ನಡೆ ಖಂಡನೀಯ. ಇಂತಹ ನಡೆ ಸಮಾಜದಲ್ಲಿ ವಿಭಜನೆಯ ವಾತಾವರಣಕ್ಕೆ ಕಾರಣವಾಗುತ್ತದೆ ಎಂದು ಆರೋಪಿಸಿದರು. ಸಂಬಂಧಿಸಿದ ಪೊಲೀಸ್ ಅಧಿಕಾರಿಗಳ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಸೇವೆ ಅಂಗವಾಗಿ ಸೆ.17ರಿಂದ ಅ.17ರವರೆಗೆ ಬಿಜೆಪಿ ವತಿಯಿಂದ ವಿವಿಧ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ರಕ್ತದಾನ ಶಿಬಿರ, ಆರೋಗ್ಯ ತಪಾಸಣೆ, ಸ್ವಚ್ಛತಾ ಅಭಿಯಾನ, ಗಿಡ ನೆಡುವುದು, ಅನಾಥಾಶ್ರಮ ಹಾಗೂ ವೃದ್ಧಾಶ್ರಮಗಳಿಗೆ ಭೇಟಿ, ಬೀದಿ ನಾಟಕ, ಸೇವಾ ಜ್ಯೋತಿ ಯಾತ್ರೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದರು.


ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರುಡಗಿ, ಎಂ.ಎಸ್. ಕರಿಗೌಡ್ರ, ಎಂ.ಎಂ. ಹಿರೇಮಠ, ನಿರ್ಮಲಾ ಕೊಳ್ಳಿ, ಉಷಾ ದಾಸರ, ಲಿಂಗರಾಜ ಪಾಟೀಲ ಸೇರಿದಂತೆ ಪಕ್ಷದ ಪ್ರಮುಖರು ಉಪಸ್ಥಿತರಿದ್ದರು.

## ಸೆ.17ರಂದು ಪುಟ್ಟರಾಜ ಗವಾಯಿಗಳ 16ನೇ ಪುಣ್ಯಾರಾಧನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗಾನಗಂಧರ್ವ ಕಲಾ ಟ್ರಸ್ಟ್ ಹಾಗೂ ನಾದಶ್ರೀ ಸಂಗೀತ ಪಾಠಶಾಲೆ, ಗದಗ ಇವರ ಸಹಯೋಗದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಹಕಾರದೊಂದಿಗೆ ಪದ್ಮಭೂಷಣ ಡಾ. ಪಂ. ಪುಟ್ಟರಾಜ ಗವಾಯಿಗಳವರ 16ನೇ ಪುಣ್ಯಸ್ಮರಣೋತ್ಸವ ಹಾಗೂ ನಾದಶ್ರೀ ಸಂಗೀತ ಪಾಠಶಾಲೆಯ 3ನೇ ವಾರ್ಷಿಕೋತ್ಸವವನ್ನು ಸೆ.17ರಂದು ಸಂಜೆ 6 ಗಂಟೆಗೆ ನಗರದ ವಿವೇಕಾನಂದ ಬಡಾವಣೆಯ ನಾದಶ್ರೀ ಸಂಗೀತ ಪಾಠಶಾಲೆಯಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮಕ್ಕೆ ಗದಗ ಮುಕ್ತಣ್ಣೇಶ್ವರ ಮಠದ ಸದ್ಗುರು ಪೂಜ್ಯ ಶ್ರೀ ಶಂಕರಾನಂದ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಲಿದ್ದು, ಮುಂಡರಗಿ ಬೃಹನ್ಮಠದ ವೀರೇಶ್ವರ ಶರಣರು ಸಮ್ಮುಖ ವಹಿಸುವರು. ಗಾನಗಂಧರ್ವ ಕಲಾ ಟ್ರಸ್ಟ್ ಅಧ್ಯಕ್ಷ ಬಿ.ಎಂ. ಪಂಚಾಕ್ಷರಿ ಅಧ್ಯಕ್ಷತೆ ವಹಿಸುವರು.

ಸೌಖ್ಯ ಆಸ್ಪತ್ರೆಯ ಮೂತ್ರರೋಗ ಶಸ್ತ್ರಚಿಕಿತ್ಸಕ ಹಾಗೂ ಮೂತ್ರಪಿಂಡ ಕಸಿ ತಜ್ಞ ಡಾ. ಪ್ರವೀಣ ಡಂಬಳ ಅತಿಥಿಯಾಗಿ ಪಾಲ್ಗೊಳ್ಳಲಿದ್ದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಕಾರ್ಯಕ್ರಮ ಉದ್ಘಾಟಿಸುವರು.



ಇದೇ ಸಂದರ್ಭದಲ್ಲಿ ಜಯದೇವಿ ಎ. ಕವಲೂರ ಅವರಿಗೆ 'ಶ್ರೀಗುರು ಪುಟ್ಟರಾಜ ಪುರಸ್ಕಾರ' ಶಿಕ್ಷಣ ಶ್ರೀ ಗೌರವ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಕವಿತಾ ಕೆ. ಕೊನ್ನೂರು, ಸಿದ್ಧರಾಮಪ್ಪ ಶಿವನಣ್ಣಿ, ಬಸವರಾಜ ಅಂಗಡಿ ಹಾಗೂ ಗಂಗಣ್ಣ ಡಿ. ಮಲ್ಲಾಡದ ಅವರನ್ನು ವಿಶೇಷವಾಗಿ ಸನ್ಮಾನಿಸಲಾಗುವುದು.

ಸ್ವರನಮನ ಕಾರ್ಯಕ್ರಮದಲ್ಲಿ ಹನುಮಂತ ಎ. ಹೂಗಾರ ತಬಲಾ ವಾದನ, ಕುಮಾರಿ ಭಾಗ್ಯ ಶೇಖರಯ್ಯ ವಿಭೂತಿ ಬಾನ್ಸುರಿ ವಾದನ ಪ್ರಸ್ತುತಪಡಿಸಲಿದ್ದು, ನಾದಶ್ರೀ ಸಂಗೀತ ಪಾಠಶಾಲೆಯ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

## ಸಚಿವ ಬಾಲಕೃಷ್ಣ ಹೇಳಿಕೆಗೆ ಮುತ್ತು ರಾಯರಡ್ಡಿ ಆಕ್ರೋಶ

**ವಿಜಯಸಾಕ್ಷಿ ಸುದ್ದಿ, ನರಗುಂದ**

ಕೇಂದ್ರ ಸಚಿವ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರನ್ನು ಗ್ರಾಮ ಪಂಚಾಯಿತಿ ಸದಸ್ಯರಿಗೆ ಹೋಲಿಕೆ ಮಾಡಿ ಸಚಿವ ಎಚ್.ಸಿ. ಬಾಲಕೃಷ್ಣ ಅವರು ನೀಡಿರುವ ಹೇಳಿಕೆಯನ್ನು ತಾಲೂಕಿನ ಚಿಕ್ಕ ನರಗುಂದ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮುತ್ತು ರಾಯರಡ್ಡಿ ತೀವ್ರವಾಗಿ ಖಂಡಿಸಿದ್ದಾರೆ.

ಕುಮಾರಸ್ವಾಮಿ ಅವರು ರಾಜ್ಯದ ಮಾಜಿ ಮುಖ್ಯಮಂತ್ರಿಯಾಗಿ ಹಾಗೂ ಪ್ರಸ್ತುತ ಕೇಂದ್ರ ಸಚಿವರಾಗಿ ಸಾರ್ವಜನಿಕ ಜೀವನದಲ್ಲಿ ಮಹತ್ವದ ಜವಾಬ್ದಾರಿ ಹೊಂದಿದ್ದಾರೆ. ಅಂತಹ ವ್ಯಕ್ತಿಯನ್ನು ಗ್ರಾಮ ಪಂಚಾಯಿತಿ ಸದಸ್ಯರಿಗೆ ಹೋಲಿಕೆ ಮಾಡುವುದು ಅವರ ಸ್ಥಾನಮಾನಕ್ಕೆ ಅಗೌರವ ತೋರಿದಂತಾಗಿದೆ ಎಂದು ಮುತ್ತು ರಾಯರಡ್ಡಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ರಾಜಕೀಯದಲ್ಲಿ ಭಿನ್ನಾಭಿಪ್ರಾಯಗಳು, ಆರೋಪ–ಪ್ರತ್ಯಾರೋಪಗಳು ಸಹಜ. ಆದರೆ ಟೀಕಿಸುವ ಭರದಲ್ಲಿ ವ್ಯಕ್ತಿಯ ಸ್ಥಾನಮಾನವನ್ನು ಹಗುರವಾಗಿ ಕಾಣುವ ರೀತಿಯಲ್ಲಿ ಮಾತನಾಡುವುದು ಸರಿಯಲ್ಲ.

ಸಚಿವ ಬಾಲಕೃಷ್ಣ ಅವರು ತಮ್ಮ ಹೇಳಿಕೆಯನ್ನು ಹಿಂಪಡೆದು, ಕುಮಾರಸ್ವಾಮಿ ಅವರ ಬಗ್ಗೆ ಗೌರವಯುತವಾಗಿ ಮಾತನಾಡಬೇಕು ಎಂದು ಅವರು ಆಗ್ರಹಿಸಿದ್ದಾರೆ.



ಕುಮಾರಸ್ವಾಮಿ ಅವರು ಗ್ರಾಮ ಪಂಚಾಯಿತಿ ಸದಸ್ಯರಲ್ಲ, ರಾಜ್ಯದ ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವರು. ಅವರನ್ನು ಗ್ರಾಮ ಪಂಚಾಯಿತಿ ಸದಸ್ಯರಿಗೆ ಹೋಲಿಕೆ ಮಾಡಿರುವುದು ಖಂಡನೀಯ.ರಾಜಕೀಯ ಟೀಕೆಗಳಿಗೆ ಮಿತಿಯಿರಬೇಕು. ವೈಯಕ್ತಿಕವಾಗಿ ಅಥವಾ ಸ್ಥಾನಮಾನವನ್ನು ಹಗುರಗೊಳಿಸುವ ರೀತಿಯಲ್ಲಿ ಮಾತನಾಡುವುದು ರಾಜಕೀಯ ಸಂಸ್ಕೃತಿಯಲ್ಲ ಎಂದು ಮುತ್ತು ರಾಯರಡ್ಡಿ ತಿಳಿಸಿದ್ದಾರೆ.

ಕುಮಾರಸ್ವಾಮಿ ಅವರ ರಾಜಕೀಯ ಹೇಳಿಕೆಗಳಿಗೆ ಸಚಿವ ಬಾಲಕೃಷ್ಣ ಅವರು ವಿಚಾರಾಧಾರಿತವಾಗಿ ಉತ್ತರಿಸಲಿ. ಆದರೆ ಕೇಂದ್ರ ಸಚಿವರ ಸ್ಥಾನಮಾನವನ್ನು ಕಡೆಗಣಿಸಿ ಗ್ರಾಮ ಪಂಚಾಯಿತಿ ಸದಸ್ಯರಿಗೆ ಹೋಲಿಕೆ ಮಾಡಿರುವುದು ಸರಿಯಾದ ನಡೆಯಲ್ಲ.

ಸಾರ್ವಜನಿಕ ಜೀವನದಲ್ಲಿರುವವರು ಪರಸ್ಪರರ ಸ್ಥಾನಮಾನಕ್ಕೆ ಗೌರವ ನೀಡುವ ಮೂಲಕ ಆರೋಗ್ಯಕರ ರಾಜಕೀಯ ಸಂಸ್ಕೃತಿ ಬೆಳೆಸಬೇಕು ಎಂದು ಮುತ್ತು ರಾಯರಡ್ಡಿ ಹೇಳಿದ್ದಾರೆ.

## ಕ್ರೀಡೆಯಲ್ಲಿ ನಿರಂತರ ಪ್ರಯತ್ನವೇ ಮುಖ್ಯ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕ್ರೀಡೆಯಲ್ಲಿ ಸೋಲು–ಗೆಲುವಿಗಿಂತ ಭಾಗವಹಿಸುವಿಕೆ, ಕ್ರೀಡಾಸ್ಫೂರ್ತಿ ಹಾಗೂ ನಿರಂತರ ಪ್ರಯತ್ನವೇ ಮುಖ್ಯ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು. ಸಮೀಪದ ಒಡೆಯರ ಮಲ್ಲಾಪುರ ಮುರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಮಂಗಳವಾರ ನಡೆದ ಶಿಗ್ಲಿ ಗ್ರೂಪ್ ಮಟ್ಟದ ಪ್ರೌಢಶಾಲೆಗಳ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡಾಕೂಟಗಳು ವಿದ್ಯಾರ್ಥಿಗಳಿಗೆ ತಮ್ಮ ಪ್ರತಿಭೆ ಪ್ರದರ್ಶಿಸಲು ಉತ್ತಮ ವೇದಿಕೆ ಕಲ್ಪಿಸುವುದರ ಜತೆಗೆ ನಾಯಕತ್ವ ಗುಣ, ಆತ್ಮವಿಶ್ವಾಸ, ಶಿಸ್ತು ಹಾಗೂ ತಂಡಭಾವ ಬೆಳೆಸುತ್ತವೆ. ಸದೃಢ ದೇಹದಲ್ಲಿ ಸದೃಢ ಮನಸ್ಸು ನೆಲೆಸಲು ಸಾಧ್ಯ. ಕ್ರೀಡೆಯಲ್ಲಿ ತೊಡಗಿಸಿಕೊಳ್ಳುವುದರಿಂದ ದೈಹಿಕ ಸಾಮರ್ಥ್ಯದ ಜತೆಗೆ ಮಾನಸಿಕ ಸ್ಥೈರ್ಯವೂ ವೃದ್ಧಿಯಾಗುತ್ತದೆ ಎಂದರು. ಸ್ಪರ್ಧೆಯಲ್ಲಿ ಗೆಲುವು ಸಾಧಿಸಿದಾಗ ಅಹಂಕಾರಪಡದೆ, ಸೋಲು ಎದುರಾದಾಗ ಕುಗ್ಗದೆ, ತಮ್ಮ ತಪ್ಪುಗಳನ್ನು ವಿಶ್ಲೇಷಿಸಿಕೊಂಡು ಮುಂದಿನ ಸಾಧನೆಗೆ ಸಿದ್ಧರಾಗಬೇಕು. ಕ್ರೀಡೆಯಿಂದ ಶಿಸ್ತು, ಸಮಯಪ್ರಜ್ಞೆ, ಸಹಕಾರ ಮನೋಭಾವ ಹಾಗೂ ತಂಡವಾಗಿ ಕಾರ್ಯನಿರ್ವಹಿಸುವ ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಬಹುದು ಎಂದು ಹೇಳಿದರು. ಗ್ರಾಮೀಣ ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಯನ್ನು ಗುರುತಿಸಿ, ಅವರಿಗೆ ಸೂಕ್ತ ಮಾರ್ಗದರ್ಶನ ಹಾಗೂ ಅವಕಾಶ ಕಲ್ಪಿಸಬೇಕು. ಆಗ ಮಾತ್ರ ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಲು ಸಾಧ್ಯ. ಶಾಲೆಗಳು ಪಠ್ಯ ಚಟುವಟಿಕೆಗಳ ಜತೆಗೆ ಕ್ರೀಡೆಗೂ ಸಮಾನ ಆದ್ಯತೆ ನೀಡಬೇಕು ಎಂದು ಲಮಾಣಿ ಸಲಹೆ ನೀಡಿದರು.



ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ನಾಗರಾಜ ಕಳಸಾಪುರ ಮಾತನಾಡಿ, ಕ್ರೀಡೆಯು ದೈಹಿಕ ಆರೋಗ್ಯದ ಜತೆಗೆ ಆತ್ಮವಿಶ್ವಾಸ, ಶಿಸ್ತು, ಸಮಯಪ್ರಜ್ಞೆ ಹಾಗೂ ನಾಯಕತ್ವ ಗುಣಗಳನ್ನು ಬೆಳೆಸುತ್ತದೆ. ವಿದ್ಯಾರ್ಥಿಗಳು ವಿದ್ಯಾಭ್ಯಾಸದೊಂದಿಗೆ ಕ್ರೀಡಾ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಮೊಬೈಲ್, ಟಿವಿಯಂತಹ ಸಾಧನಗಳಿಗೆ ಹೆಚ್ಚು ಸಮಯ ಮೀಸಲಿಡುವ ಬದಲು ದೈಹಿಕ ಚಟುವಟಿಕೆಗಳಿಗೆ ಆದ್ಯತೆ ನೀಡಬೇಕು ಎಂದರು. ಬಿಆರ್‌ಸಿ ಎಸ್.ಕೆ. ಹವಾಲ್ದಾರ್, ಬಿ.ಎಂ. ಯರಗುಪ್ಪಿ, ಸಿಆರ್‌ಪಿ ಜ್ಯೋತಿ ಗಾಯಕವಾಡ, ಕೆ.ಆರ್. ಲಮಾಣಿ, ಎಚ್‌ಎಂ ಸಪ್ಪಿನ, ಗಂಗಾಧರ ಮೆಣಸಿನಕಾಯಿ, ಅಶೋಕ ಮೆಣಸಿನಕಾಯಿ, ಭೀಮಣ್ಣ ಯಂಗಾಡಿ ಉಪಸ್ಥಿತರಿದ್ದರು. ಪ್ರವೀಣ ಗಾಯಕರ್ ಸ್ವಾಗತಿಸಿದರು. ದೈಹಿಕ ಶಿಕ್ಷಕ ಸಿದ್ದಣ್ಣ ಬೆಟಗೇರಿ ಪ್ರತಿಜ್ಞಾವಿಧಿ ಬೋಧಿಸಿದರು. ಅರ್ಜುನ ವಠಾರ ವಂದಿಸಿದರು. ರೂಪಾ ಮನ್ನಂಗಿ ನಿರೂಪಿಸಿದರು. ಒಡೆಯರ ಮಲ್ಲಾಪುರ, ಶಿಗ್ಲಿ ಹಾಗೂ ರಾಮಗೇರಿ ಶಾಲೆಗಳ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಯುವಜನರಲ್ಲಿ ಸಂವಿಧಾನಿಕ ಆಶಯಗಳ ಬಗ್ಗೆ ಜಾಗೃತಿ ಮೂಡಿಸಬೇಕು

# ಪ್ರಜಾಪ್ರಭುತ್ವದ ಮೌಲ್ಯ ಅರಿವು ಪ್ರತಿಯೊಬ್ಬರ ಕರ್ತವ್ಯ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಪ್ರಜಾಪ್ರಭುತ್ವದ ಮೌಲ್ಯಗಳು ಹಾಗೂ ಅದರ ಬೇರುಗಳನ್ನು ಪ್ರತಿಯೊಬ್ಬರೂ ಅರ್ಥೈಸಿಕೊಳ್ಳುವ ನಿಟ್ಟಿನಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎಫ್.ಹೆಚ್. ಜಕ್ಕಪ್ಪನವರ ಹೇಳಿದರು.

ನಗರದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಹಯೋಗದಲ್ಲಿ ಮಂಗಳವಾರ ಆಯೋಜಿಸಿದ್ದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ–2026 ಹಾಗೂ ಯುವ ಸಂಸತ್ತು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಸವಣ್ಣನವರ ಅನುಭವ ಮಂಟಪದಿಂದ ಚಾಮರಾಜನಗರದವರೆಗೆ ಸುಮಾರು 31 ಜಿಲ್ಲೆಗಳನ್ನು ಹಾದುಹೋಗುವ ಬೃಹತ್ ಮಾನವ ಸರಪಳಿ ನಿರ್ಮಿಸಿ ಸಂವಿಧಾನದ ಆಶಯಕ್ಕೆ ನಿಷ್ಠೆ ತೋರಿದ ಹೆಮ್ಮೆ ಕರ್ನಾಟಕಕ್ಕಿದೆ. ಇಂದಿನ ಯುವಜನರಲ್ಲಿ ದೇಶದ ಇತಿಹಾಸ, ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಬಗ್ಗೆ ಅರಿವು ಮೂಡಿಸುವುದು ಅತ್ಯಂತ ಮುಖ್ಯವಾಗಿದೆ. ಈ ಉದ್ದೇಶದಿಂದ ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಯುವ ಸಂಸತ್ತು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದರು.



ಜಾತಿ, ಭೇದಭಾವಗಳನ್ನು ಮೀರಿ ನಾವೆಲ್ಲರೂ ಭಾರತೀಯರು ಎಂಬ ಭಾವನೆ ಬೆಳೆಸಿಕೊಳ್ಳಬೇಕು. ಸಂವಿಧಾನದ ಪೀಠಿಕೆಯಲ್ಲಿ ಪ್ರತಿಪಾದಿಸಿರುವ ಭ್ರಾತೃತ್ವ ಮತ್ತು ಸಮಾನತೆಯ ಮೌಲ್ಯಗಳು ಸಮಾಜದಲ್ಲಿ ಬೇರೂರಬೇಕು. ಯುವ ಮನಸ್ಸುಗಳಿಗೆ ಸಂವಿಧಾನಿಕ ಮೌಲ್ಯಗಳನ್ನು ಪರಿಚಯಿಸಿ ದೇಶದ ಐಕ್ಯತೆ ಕಾಪಾಡುವ ಜವಾಬ್ದಾರಿ ಹಿರಿಯರ ಮೇಲಿದೆ ಎಂದು ಹೇಳಿದರು.

> ಪ್ರಜಾಪ್ರಭುತ್ವದ ಮೌಲ್ಯಗಳು ಹಾಗೂ ಸಂವಿಧಾನದ ಆಶಯಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನ ಮತ್ತು ಕರ್ತವ್ಯದಲ್ಲಿ ಅಳವಡಿಸಿಕೊಳ್ಳಬೇಕು. ವಿದ್ಯಾರ್ಥಿಗಳು, ಯುವಕರು ಹಾಗೂ ಅಧಿಕಾರಿಗಳು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಗೌರವಿಸಿ, ಅನುಸರಿಸಿ ಕಾರ್ಯನಿರ್ವಹಿಸಬೇಕು.
>
> **– ಎಫ್.ಹೆಚ್. ಜಕ್ಕಪ್ಪನವರ, ವಿಧಾನ ಪರಿಷತ್ ಸದಸ್ಯರು**

ಜಿಲ್ಲಾಧಿಕಾರಿ ಸ್ನೇಹಲ್ ಆರ್. ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆ ನಮಗೆ ಅಭಿವ್ಯಕ್ತಿ ಸ್ವಾತಂತ್ರ್ಯ, ಸಂಚಾರ ಸ್ವಾತಂತ್ರ್ಯ ಹಾಗೂ ಮತದಾನದ ಹಕ್ಕು ಸೇರಿದಂತೆ ಹಲವು ಹಕ್ಕುಗಳನ್ನು ನೀಡಿದೆ. ಸಂವಿಧಾನ ನೀಡಿರುವ ಹಕ್ಕುಗಳು ಮತ್ತು ಪ್ರಜಾಪ್ರಭುತ್ವದ ನಿಜವಾದ ಅರ್ಥವನ್ನು ಪ್ರತಿಯೊಬ್ಬ ನಾಗರಿಕರೂ ತಿಳಿದುಕೊಳ್ಳಬೇಕು ಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಪ್ರಜಾಪ್ರಭುತ್ವ ಎಂದರೆ ಜನರಿಂದ, ಜನರಿಗಾಗಿ ಮತ್ತು ಜನರಿಗೋಸ್ಕರ ಇರುವ ಆಡಳಿತ. ಸಂವಿಧಾನದ ಪೀಠಿಕೆ 'ನಾವು ಭಾರತದ ಪ್ರಜೆಗಳು' ಎಂಬ ಸಾಲಿನಿಂದಲೇ ಆರಂಭವಾಗುತ್ತದೆ. ಇದು ದೇಶದ ಸಮಸ್ತ ಜನರ ಆಶಯವನ್ನು ಪ್ರತಿಬಿಂಬಿಸುತ್ತದೆ ಎಂದರು.ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಸಂವಿಧಾನದ ಪೀಠಿಕೆಯನ್ನು ಬೋಧಿಸಿದರು. ಕರ್ನಾಟಕ ವಿಶ್ವವಿದ್ಯಾಲಯದ ಮಾನವಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕ ಡಾ. ಸದಾನಂದ ಸುಗಂಧಿ ಉಪನ್ಯಾಸ ನೀಡಿದರು.

ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಸಹಾಯಕ ಪೊಲೀಸ್ ಆಯುಕ್ತ ಪ್ರಶಾಂತ ಸಿದ್ದನಗೌಡರ, ಪ್ರೊಬೆಷನರಿ ಐಎಎಸ್ ಅಧಿಕಾರಿ ಅನುಪ್ರಿಯಾ ಸಾಕ್ಯ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಉಮೇಶ ಬೊಮ್ಮಕ್ಕನವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

### ಜೈಲುಗಳ ಮೇಲೆ ದಾಳಿ ನಡೆಸಿದ್ದೇವೆ, ಅದನ್ನೂ ಮಾಡಬಾರದಾ? ಖರ್ಗೆ ತಿರುಗೇಟು

# ನಾನು ಕೇವಲ ನಾಲ್ಕು ಸೆಲ್‌ಗಳ ಗೃಹ ಸಚಿವನಲ್ಲ

**ವಿಜಯಸಾಕ್ಷಿ ಸುದ್ದಿ, ಕಲಬುರಗಿ**

ಬಿಡದಿ ವಿಚಾರವನ್ನು ಡೈವರ್ಟ್ ಮಾಡಲು ಜೈಲುಗಳ ಮೇಲೆ ದಾಳಿ ನಡೆಸಿಲ್ಲ. ರಾಜ್ಯದ ಹಲವು ಜೈಲುಗಳ ಮೇಲೆ ದಾಳಿ ನಡೆಸಿದ್ದೇವೆ. ನಾನು ಕೇವಲ ನಾಲ್ಕು ಸೆಲ್‌ಗಳ ಗೃಹ ಸಚಿವನಲ್ಲ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ಆರೋಪಕ್ಕೆ ತಿರುಗೇಟು ನೀಡಿದರು.

ಕಲಬುರಗಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಹಲವು ಜೈಲುಗಳ ಮೇಲೆ ದಾಳಿ ನಡೆಸಿದ್ದೇವೆ. ಅದನ್ನೂ ಮಾಡಬಾರದಾ ಎಂದು ಪ್ರಶ್ನಿಸಿದರು. ಜೈಲಿನಿಂದ ಪ್ರಜ್ವಲ್ ರೇವಣ್ಣ ನಿರಂತರವಾಗಿ ಫೋನ್‌ನಲ್ಲಿ ಮಾತನಾಡಿರುವ ವಿಚಾರ ಪ್ರಸ್ತಾಪಿಸಿದ ಅವರು, "ಅವರು ಯಾರಿಗೆ ಮಾತನಾಡಿದ್ದಾರೆ? ಇಷ್ಟೆಲ್ಲ ಮಾತನಾಡುವವರು ಯಾಕೆ ಮಾಹಿತಿ ನೀಡಿಲ್ಲ? ಕುಟುಂಬದವರೊಂದಿಗೆ ತಾನೇ ಅವರು ಮಾತನಾಡಿದ್ದು" ಎಂದರು.

ಹಾಸನದಲ್ಲಿ ನಡೆದ ಘಟನೆಗಳ ಕುರಿತು ಮಾತನಾಡಿದ ಪ್ರಿಯಾಂಕ್ ಖರ್ಗೆ, ನೊಂದ ಕುಟುಂಬಗಳ ಕ್ಷೇಮ ವಿಚಾರಿಸುವುದು ಮೊದಲು ಆಗಬೇಕು ಎಂದು ಹೇಳಿದರು. "ಹಾಸನದಲ್ಲಿ ಏನಾಗಿತ್ತು ಎಂಬುದರ ಬಗ್ಗೆ ಒಂದು ಬಾರಿಯಾದರೂ ಮಾತನಾಡಿದ್ದಾರಾ? ಮೊದಲು ಆ ಕುಟುಂಬಗಳ ಕ್ಷಮೆ ಕೇಳಬೇಕು. ನೊಂದ ಮಹಿಳೆಯರ ಕ್ಷೇಮ ವಿಚಾರಿಸಬೇಕು" ಎಂದು ಹೇಳಿದರು.



ವಿಜಯದಶಮಿಯಿಂದ ಯುದ್ಧ ಆರಂಭವಾಗಲಿದೆ ಎಂಬ ಎಚ್.ಡಿ. ಕುಮಾರಸ್ವಾಮಿ ಹೇಳಿಕೆಗೆ ವ್ಯಂಗ್ಯವಾಗಿ ಪ್ರತಿಕ್ರಿಯಿಸಿದ ಅವರು, "ಅಲ್ಲೋಲ–ಕಲ್ಲೋಲ ಆಗೋದು ಮುಂದಕ್ಕೆ ಹೋಯ್ತಾ?" ಎಂದು ಪ್ರಶ್ನಿಸಿದರು.

ತಮ್ಮ ಕುಟುಂಬವನ್ನು ಮುಗಿಸಲು ಪ್ಲ್ಯಾನ್ ಮಾಡಿದ್ದಾರೆ ಎಂಬ ಕುಮಾರಸ್ವಾಮಿ ಆರೋಪಕ್ಕೂ ತಿರುಗೇಟು ನೀಡಿದ ಅವರು, "ಯಾರು ಪ್ರಯತ್ನ ಮಾಡುತ್ತಿದ್ದಾರೆ? ನಾವ್ಯಾಕೆ ಅದನ್ನು ಮಾಡೋಣ?" ಎಂದು ಪ್ರಶ್ನಿಸಿದರು.

ಟಿ. ನರಸೀಪುರ ಇನ್‌ಸ್ಪೆಕ್ಟರ್ ವಿರುದ್ಧದ ಹಳೆಯ ಪ್ರಕರಣದ ಕುರಿತು ಮಾತನಾಡಿದ ಪ್ರಿಯಾಂಕ್ ಖರ್ಗೆ, ಅವರ ವಿರುದ್ಧ ಇಲಾಖೆ ವಿಚಾರಣೆ ಆಗಿರಬೇಕು. ಅದಕ್ಕೂ ಗಣೇಶೋತ್ಸವದ ವಿಚಾರಕ್ಕೂ ಏನು ಸಂಬಂಧ ಎಂದು ಪ್ರಶ್ನಿಸಿದರು. ಗಣೇಶೋತ್ಸವಕ್ಕೆ ಸಂಬಂಧಿಸಿದ ಇಲಾಖೆಯ ಎಸ್‌ಒಪಿ ಕುರಿತು ಮಾತನಾಡಿದ ಅವರು, ಆರೋಪಗಳಿದ್ದರೆ ದೂರು ನೀಡಲಿ, ತನಿಖೆ ನಡೆಸಲಾಗುವುದು ಎಂದರು. ಗಣೇಶೋತ್ಸವವನ್ನು ಎಲ್ಲರೂ ವಿಜೃಂಭಣೆಯಿಂದ ಆಚರಿಸಬೇಕು. ಆದರೆ ಒಂದು ಸಮುದಾಯದ ಸಂಭ್ರಮ ಮತ್ತೊಬ್ಬರಿಗೆ ಆತಂಕ ಉಂಟುಮಾಡಬಾರದು ಎಂದು ಮನವಿ ಮಾಡಿದರು. "ಇವರಿಗೆ ಬೆಂಕಿ ಹಚ್ಚೋದೇ ಕೆಲಸ" ಎಂದು ಇದೇ ವೇಳೆ ಟೀಕಿಸಿದರು.

> ರಾಜ್ಯದ ಎಲ್ಲ ಜೈಲುಗಳ ಮೇಲೂ ಕಾನೂನುಬದ್ಧವಾಗಿ ಕ್ರಮ ಕೈಗೊಳ್ಳಲಾಗುತ್ತದೆ. ನಾನು ಕೇವಲ ನಾಲ್ಕು ಸೆಲ್‌ಗಳ ಗೃಹ ಸಚಿವನಲ್ಲ.
>
> **– ಪ್ರಿಯಾಂಕ್ ಖರ್ಗೆ, ಗೃಹ ಸಚಿವ**

ಉಮರ್ ಖಾಲಿದ್ ಅವರನ್ನು ರಾಷ್ಟ್ರೀಯವಾದಿ ಎಂದು ಬಿಂಬಿಸುವ ವಿಚಾರದ ಕುರಿತು ಮಾತನಾಡಿದ ಅವರು, ಉಮರ್ ಖಾಲಿದ್ ಎಷ್ಟು ದಿನದಿಂದ ಜೈಲಿನಲ್ಲಿದ್ದಾನೆ ಎಂಬುದನ್ನು ಪ್ರಶ್ನಿಸಿದರು. ಕೇಂದ್ರ ಸರ್ಕಾರ ಆತನ ವಿಚಾರಣೆಯನ್ನು ನಡೆಸಿ ನ್ಯಾಯಾಲಯದ ಮೂಲಕ ತೀರ್ಪು ಹೊರಬರಲು ಅವಕಾಶ ನೀಡಬೇಕು ಎಂದರು.

ಟ್ರಯಲ್ ನಡೆಸಿ ಕೋರ್ಟ್ ತೀರ್ಪು ನೀಡಲಿ. ಆಗ ಆತ ಅಪರಾಧಿಯೇ ಅಥವಾ ಅಲ್ಲವೇ ಎಂಬುದು ಸ್ಪಷ್ಟವಾಗುತ್ತದೆ. ಬಿಜೆಪಿ ಹೇಳಿದರೆ ನಾವು ಒಪ್ಪಿಕೊಳ್ಳಬೇಕಾ? ಎಂದು ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದರು.

# ಶ್ರೀ ಸಿದ್ಧಿವಿನಾಯಕ ಗಣಪತಿ ಪ್ರತಿಷ್ಠಾಪನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಬೆಟಗೇರಿಯ ಮಂಜುನಾಥ ನಗರದಲ್ಲಿ ಶ್ರೀ ಸಿದ್ಧಿವಿನಾಯಕ ಗಣಪತಿಯನ್ನು ಸರ್ವಶಕ್ತಿ ವಿವಿಧೋದ್ದೇಶಗಳ ಟ್ರಸ್ಟ್ ವತಿಯಿಂದ ಭಕ್ತಿಭಾವದಿಂದ ಪ್ರತಿಷ್ಠಾಪಿಸಲಾಯಿತು.

ಈ ಸಂದರ್ಭದಲ್ಲಿ ಪರಶುರಾಮ ಕೆಂಚಲಿ, ಬೂದಪ್ಪ ಹುಣಸಿಮರದ, ಹನುಮಾನ್ ಸಿಂಗ್ ಜಮಾದಾರ, ಪ್ರತೀಕ ಮೇಳೆನವರ, ಹೊಳೆಬಸಪ್ಪ ಅಕ್ಕಿ, ಆರ್.ಎಲ್. ಮೇಳೆನವರ ಸೇರಿದಂತೆ ಸಮಿತಿಯ ಸದಸ್ಯರು ಉಪಸ್ಥಿತರಿದ್ದು ಗಣಪತಿ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

# ಗಣೇಶನ ಭವ್ಯ ಮೆರವಣಿಗೆ; ಭಕ್ತರ ಸಂಭ್ರಮದ ಹೆಜ್ಜೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗಣೇಶ ಚತುರ್ಥಿಯ ಅಂಗವಾಗಿ ನಗರದ ಗದಗ ಕೃಷಿ ಉತ್ಪನ್ನ ಮಾರುಕಟ್ಟೆ (ಎಪಿಎಂಸಿ) ಪ್ರಾಂಗಣದ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಶ್ರೀ ಗಣೇಶ ಮೂರ್ತಿಯ ಪ್ರತಿಷ್ಠಾಪನಾ ಮೆರವಣಿಗೆ ವೈಭವದಿಂದ ಜರುಗಿತು.

ನಗರದ ಮಸಾರಿ ಭಾಗದಲ್ಲಿರುವ ಶ್ರೀ ವರಸಿದ್ಧಿ ವಿನಾಯಕ ದೇವಸ್ಥಾನದಿಂದ ಆರಂಭಗೊಂಡ ಮೆರವಣಿಗೆಯಲ್ಲಿ ಟ್ರಸ್ಟ್ ಕಮಿಟಿ ಸದಸ್ಯರು, ಭಕ್ತರು ಹಾಗೂ ಯುವಕರು ಉತ್ಸಾಹದಿಂದ ಪಾಲ್ಗೊಂಡರು. ಸಾಂಪ್ರದಾಯಿಕ ಉಡುಪು ಧರಿಸಿದ್ದ ಮಹಿಳೆಯರು ಹಾಗೂ ಯುವಕರು ಮಂಗಳವಾದ್ಯಗಳ ಮಧುರ ನಾದಕ್ಕೆ ಹೆಜ್ಜೆ ಹಾಕಿದರು. ಭಜನೆ, ಮೇಲೋಡಿ ಹಾಗೂ ಭಕ್ತಿಗೀತೆಗಳ ಗಾಯನದ ನಡುವೆ 'ಗಣಪತಿ ಬಪ್ಪಾ ಮೋರಯಾ, ಮಂಗಳಮೂರ್ತಿ ಮೋರಯಾ' ಎಂಬ ಜಯಘೋಷಗಳು ಮೊಳಗಿದವು.

ಮೆರವಣಿಗೆಯುದ್ದಕ್ಕೂ ಯುವಕರು ಬಣ್ಣಬಣ್ಣದ ಗುಲಾಲ್ ಎರಚಿ ಕುಣಿದು ಕುಪ್ಪಳಿಸುವ ಮೂಲಕ ಹಬ್ಬದ ಸಂಭ್ರಮ ಹೆಚ್ಚಿಸಿದರು. ಭಕ್ತಿಭಾವ ಹಾಗೂ ಸಡಗರದ ವಾತಾವರಣದಲ್ಲಿ ಮೆರವಣಿಗೆ ಸಾಗಿತು.

ನಂತರ ಶ್ರೀ ಗಣೇಶ ಮೂರ್ತಿಯನ್ನು ನಿಗದಿಪಡಿಸಿದ ಎಪಿಎಂಸಿ ಆವರಣದ ಸಾರ್ವಜನಿಕ ಮಂಟಪಕ್ಕೆ ಕರೆತರಲಾಯಿತು. ವೈದಿಕ ಮಂತ್ರೋಚ್ಚಾರಣೆಗಳೊಂದಿಗೆ ಶಾಸ್ತ್ರೋಕ್ತವಾಗಿ ಗಣೇಶ ಮೂರ್ತಿ ಪ್ರತಿಷ್ಠಾಪಿಸಿ ಮಹಾಮಂಗಳಾರತಿ ನೆರವೇರಿಸಲಾಯಿತು.


ಈ ಸಂದರ್ಭದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮರೆಡ್ಡಿ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ್ ಆರ್. ವಾರಕರ, ಕಾರ್ಯದರ್ಶಿ ರಾಜಶೇಖರ ಬಿ. ಮುಧೋಳ, ಉಪಾಧ್ಯಕ್ಷ ರಾಜು ಎನ್. ಮೂಲೀಮನಿ, ಸಹಕಾರ್ಯದರ್ಶಿ ಚಂದ್ರಕಾಂತ ಬಿ. ಸವದತ್ತಿ, ಖಜಾಂಚಿ ಮಹೇಶ ಜಿ. ಗಾಣಿಗೇರ, ವಿನಾಯಕ ಪಿ. ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಈ. ಬಾಳಿಕಾಯಿ, ಗಿರೀಶ ವಿ. ಅಳವಂಡಿ, ದಯಾನಂದ ದುಂಡಪ್ಪನವರ, ಮುರಗೇಶ ಬಡ್ನಿ, ಅಜೀತ್ ಪುಣೇಕರ, ವಿನೂತ್ ಕವಲೂರ, ಸಾಗರ ವಜ್ರೇಶ್ವರಿ, ಮಂಜುನಾಥ ಬೇಲೇರಿ, ನಿಕೀಲ್ ದನ್ನೂರಮಠ, ಬಸವರಾಜ ಹರ್ತಿ, ಪ್ರಕಾಶ ಉಗಲಾಟದ, ಪ್ರದೀಪ್ ಆಸಂಗಿ, ಶರತ್ ಅಂಗಡಿ ಹಾಗೂ ಪ್ರಮೋದ್ ಬಳಗಾನೂರ ಸೇರಿದಂತೆ ದಲಾಲ ವರ್ತಕರ ಸಂಘ ಹಾಗೂ ಖರೀದಿ ವರ್ತಕರ ಸಂಘದ ಸರ್ವ ಸದಸ್ಯರು ಉಪಸ್ಥಿತರಿದ್ದರು.

# 'ವಕ್ರತುಂಡ' ಚಿತ್ರದ ಧಮಾಕಾ: 'ಜೈ ಗಣೇಶ' ಟೈಟಲ್ ಟ್ರ್ಯಾಕ್‌ಗೆ ಭರ್ಜರಿ ಸದ್ದು

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಗೌರಿ–ಗಣೇಶ ಹಬ್ಬದ ಸಡಗರದಲ್ಲಿರುವ ಸಿನಿರಸಿಕರಿಗೆ ಬಹುನಿರೀಕ್ಷಿತ ಕನ್ನಡ ಚಿತ್ರ 'ವಕ್ರತುಂಡ' ತಂಡ ಭರ್ಜರಿ ಹಬ್ಬದ ಉಡುಗೊರೆ ನೀಡಿದೆ. ಚಿತ್ರದ ಹೈ–ಎನರ್ಜಿ ಹಾಗೂ ಭಕ್ತಿಭಾವದ ವಿಡಿಯೋ ಟೈಟಲ್ ಟ್ರ್ಯಾಕ್ 'ಜೈ ಗಣೇಶ' ಬಿಡುಗಡೆಯಾಗಿದ್ದು, ಸಿನಿಪ್ರಿಯರಿಂದ ಉತ್ತಮ ಪ್ರತಿಕ್ರಿಯೆ ಪಡೆದು ಸದ್ದು ಮಾಡುತ್ತಿದೆ.

ಲೋಚನ್ ಕಂಬೈನ್ಸ್ ಬ್ಯಾನರ್ ಅಡಿಯಲ್ಲಿ ಅದ್ದೂರಿಯಾಗಿ ಮೂಡಿಬಂದಿರುವ ಈ ಹಾಡಿಗೆ ಪ್ರತಿಭಾವಂತ ಸಂಗೀತ ನಿರ್ದೇಶಕ ಜೇಮ್ಸ್ ಆರ್ಕಿಟೆಕ್ಟ್ ಮಾಸ್ ಮತ್ತು ಕ್ಲಾಸ್ ಶೈಲಿಯಲ್ಲಿ ರಾಗ ಸಂಯೋಜನೆ ಮಾಡಿದ್ದಾರೆ. ಹಬ್ಬದ ಜೋಶ್ ಹೆಚ್ಚಿಸುವ ಸಾಹಿತ್ಯವನ್ನು ರಾಘವ ರಂಜನ್ ಬರೆದಿದ್ದು, ಖ್ಯಾತ ಗಾಯಕ ಶಶಾಂಕ್ ಶೇಷಗಿರಿ ತಮ್ಮ ಕಂಠಸಿರಿಯಿಂದ ಹಾಡಿಗೆ ಜೀವ ತುಂಬಿದ್ದಾರೆ.



ಮಾಸ್ಟರ್ ಕೊರಿಯೋಗ್ರಾಫರ್ ಕಂಬಿ ರಾಜು ಅವರ ನೃತ್ಯ ನಿರ್ದೇಶನ, ಛಾಯಾಗ್ರಾಹಕ ಜೈ ಆನಂದ ಅವರ ಛಾಯಾಗ್ರಹಣ ಹಾಗೂ ಎಡಿಟರ್ ರವಿ ತೇಜ ಅವರ ಸಂಕಲನ ಹಾಡಿನ ಮೆರುಗನ್ನು ಮತ್ತಷ್ಟು ಹೆಚ್ಚಿಸಿದೆ. ಪ್ರತಿಭಾವಂತ ನಿರ್ದೇಶಕ ಹರೀಶ್ ಕುಂದುರ್ ಆಕ್ಷನ್–ಕಟ್ ಹೇಳಿದ್ದಾರೆ.

ಈ ಹಿಂದೆ ನೈಂಟಿಕುಡಿ ಪಲ್ಟಿ ಹೊಡಿ, ದೇವರಾಣೆ, ಸಿಗರೇಟ್ ಸೇದ್ಬೇಡಿ, ಜಿಲೇಬಿ ಚಿತ್ರಗಳನ್ನು ನಿರ್ಮಿಸಿದ್ದ ಲಕ್ಕಿ ಶಂಕರ್ (ಶಂಕರ್ ಎಸ್.) ಕಥೆ ಬರೆದು ಚಿತ್ರವನ್ನು ನಿರ್ಮಿಸಿದ್ದಾರೆ. ಉಮೇಶ್ ಬಿ.ಹೆಚ್. ದಾವಣಗೆರೆ ಸಹ–ನಿರ್ಮಾಪಕರಾಗಿದ್ದಾರೆ. ನಾಗೇಂದ್ರ, ಡಾ. ಪ್ರಭು ಗಂಜಿಹಾಳ್ ಹಾಗೂ ಡಾ. ವೀರೇಶ್ ಹಂಡಿಗಿ ಪಿಆರ್‌ಒಗಳಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಚಿತ್ರದ ತಾರಾಬಳಗದಲ್ಲಿ ರಚಿತಾ ಮಹಾಲಕ್ಷ್ಮಿ, ಲಕ್ಕಿ ಶಂಕರ್, ಉಮೇಶ್ ಬಿ.ಹೆಚ್. ದಾವಣಗೆರೆ, ಮೂಗು ಸುರೇಶ್, ಸಂಗಮೇಶ್ ಕಾಸ್, ಅಮಿತ್ ರಾವ್, ಆಟೋ ನಾಗರಾಜ್, ಭುವನ ಹರೀಶ್ ಹಾಗೂ ಮೋಹನಕೃಷ್ಣ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ಸದ್ಯದಲ್ಲೇ ರಾಜ್ಯಾದ್ಯಂತ ಚಿತ್ರಮಂದಿರಗಳಲ್ಲಿ ತೆರೆಕಾಣಲು ಸಜ್ಜಾಗಿರುವ 'ವಕ್ರತುಂಡ' ಚಿತ್ರದ 'ಜೈ ಗಣೇಶ' ವಿಡಿಯೋ ಹಾಡು ಯೂಟ್ಯೂಬ್‌ನಲ್ಲಿ ಸಿನಿರಸಿಕರ ಗಮನ ಸೆಳೆಯುತ್ತಿದ್ದು, ಗಣೇಶೋತ್ಸವದ ಸಂಭ್ರಮಕ್ಕೆ ಮತ್ತಷ್ಟು ಮೆರುಗು ತಂದಿದೆ.

### ಗುರು ಬೋಧಾಮೃತದಿಂದ ಬದುಕು ಸಾರ್ಥಕ: ರಂಭಾಪುರಿ ಜಗದ್ಗುರು

# ದೇವರು, ಮರಣ ಮರೆಯದಿರು ಮನುಜ

**ವಿಜಯಸಾಕ್ಷಿ ಸುದ್ದಿ, ನರಗುಂದ**

ಮಾನವ ಜೀವನ ದೇವರು ನೀಡಿದ ಅಮೂಲ್ಯ ವರ. ಅರಿವುಳ್ಳ ಜನ್ಮ ಪಡೆದ ಮನುಷ್ಯ ಶಿವಜ್ಞಾನ ಹಾಗೂ ಗುರು ಕಾರುಣ್ಯ ಪಡೆದು ಬದುಕಬೇಕು. ಜೀವನದಲ್ಲಿ ದೇವರು ಹಾಗೂ ಮರಣವನ್ನು ಎಂದಿಗೂ ಮರೆಯಬಾರದು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ತಾಲೂಕಿನ ಕೊಣ್ಣೂರು ಗ್ರಾಮದ ಚಿಕ್ಕಮಠದಲ್ಲಿ ಶ್ರೀ ಜಗದ್ಗುರು ವಿಶ್ವಾರಾಧ್ಯ ಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ಸೋಮವಾರ ನಡೆದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.



ನಾವು ನಿಂತಿರುವ ನೆಲ, ಕುಡಿಯುವ ನೀರು, ತಿನ್ನುವ ಅನ್ನ ಹಾಗೂ ಉಸಿರಾಡುವ ಗಾಳಿ ದೇವರು ನೀಡಿರುವ ಅಮೂಲ್ಯ ಕೊಡುಗೆಗಳು. ಇವುಗಳಿಲ್ಲದೆ ಮನುಷ್ಯ ಬದುಕಲು ಸಾಧ್ಯವಿಲ್ಲ. ಇಷ್ಟೆಲ್ಲ ಅಮೂಲ್ಯ ಸಂಪನ್ಮೂಲಗಳನ್ನು ನೀಡಿರುವ ದೇವರನ್ನು ಸ್ಮರಿಸುವುದು ಪ್ರತಿಯೊಬ್ಬರ ಧರ್ಮವಾಗಬೇಕು ಎಂದರು.

ದೇವರು ಎಲ್ಲರಲ್ಲಿಯೂ ಇದ್ದಾನೆ. ಆದರೆ ದೇವರಲ್ಲಿ ಎಲ್ಲರೂ ಇಲ್ಲ ಎಂಬುದು ಸತ್ಯ. ಶ್ರೀ ಜಗದ್ಗುರು ರೇಣುಕಾಚಾರ್ಯರು ವೀರಶೈವ ಧರ್ಮದ ಸಿದ್ಧಾಂತದಲ್ಲಿ ಮಾನವ ಜೀವನದ ಅಮೂಲ್ಯ ಮೌಲ್ಯಗಳನ್ನು ಪ್ರತಿಪಾದಿಸಿದ್ದಾರೆ. ಅಂಗ ಲಿಂಗವಾಗಲು, ನರ ಹರನಾಗಲು, ಭವಿ ಭಕ್ತನಾಗಲು ಸಾಧನೆಯ ಮಾರ್ಗವನ್ನು ಬೋಧಿಸಿದ್ದಾರೆ. ಅಹಿಂಸೆಯಿಂದ ಧ್ಯಾನದವರೆಗೆ ಇರುವ ದಶಧರ್ಮ ಸೂತ್ರಗಳು ಮಾನವ ಜೀವನದ ಉನ್ನತಿ ಹಾಗೂ ಶ್ರೇಯಸ್ಸಿಗೆ ದಾರಿದೀಪವಾಗಿವೆ ಎಂದು ಹೇಳಿದರು.

ಮನುಷ್ಯ ಎಷ್ಟೇ ವರ್ಷ ಬದುಕಿದ್ದರೂ ಒಂದಲ್ಲ ಒಂದು ದಿನ ಮೃತ್ಯು ಎದುರಾಗುವುದು ನಿಶ್ಚಿತ. ಹುಟ್ಟು–ಸಾವಿನ ನಡುವಿನ ಬದುಕನ್ನು ಸಮೃದ್ಧಗೊಳಿಸಿಕೊಳ್ಳಲು ಗುರುಗಳ ಬೋಧಾಮೃತ ಅಗತ್ಯ. ಭೌತಿಕ ಬದುಕಿನೊಂದಿಗೆ ಆಂತರಿಕ ಬದುಕನ್ನೂ ಶ್ರೀಮಂತಗೊಳಿಸಿಕೊಳ್ಳಬೇಕು ಎಂದರು.

> ಮನುಷ್ಯ ಎಷ್ಟೇ ವರ್ಷ ಬದುಕಿದ್ದರೂ ಒಂದಲ್ಲ ಒಂದು ದಿನ ಮೃತ್ಯು ಎದುರಾಗುವುದು ನಿಶ್ಚಿತ. ಹುಟ್ಟು-ಸಾವಿನ ನಡುವಿನ ಬದುಕು ಸಮೃದ್ಧಗೊಳ್ಳಲು ಗುರು ಬೋಧಾಮೃತ ಅಗತ್ಯ.
>
> **– ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು**

ಶ್ರೀ ಕಾಶಿ ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಜಗದ್ಗುರುಗಳು ಮಾತನಾಡಿ, ಧರ್ಮದ ಉದಾತ್ತ ಮೌಲ್ಯಗಳನ್ನು ಬದುಕಿನ ಆಚರಣೆಯಲ್ಲಿ ಅಳವಡಿಸಿಕೊಂಡಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ. ವೀರಶೈವ ಧರ್ಮದಲ್ಲಿರುವ ಆಧ್ಯಾತ್ಮಿಕ ಸಂಪತ್ತನ್ನು ಅರಿತು, ಆಚರಿಸುವ ಮನೋಪ್ರವೃತ್ತಿ ಬೆಳೆಸಿಕೊಳ್ಳಬೇಕು ಎಂದರು.

ಚಿಕ್ಕಮಠದ ಸಿದ್ದಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಕೊಣ್ಣೂರು ಗ್ರಾಮದ ಭಕ್ತರ ಬಹುದಿನಗಳ ಕನಸು ಇಂದು ನನಸಾಗಿರುವುದು ಸಂತಸದ ಸಂಗತಿ. ಶ್ರೀ ರಂಭಾಪುರಿ ಹಾಗೂ ಕಾಶಿ ಜಗದ್ಗುರುಗಳು ಕೊಣ್ಣೂರಿಗೆ ಆಗಮಿಸಿರುವುದು ಭಕ್ತರ ಪುಣ್ಯದ ಫಲ ಎಂದರು.

ಸಮಾರಂಭದಲ್ಲಿ ನರಗುಂದ, ಆಲಮೇಲ, ಮಮದಾಪುರ ಸೇರಿದಂತೆ ವಿವಿಧ ಮಠಗಳ ಮಠಾಧೀಶರು ಪಾಲ್ಗೊಂಡಿದ್ದರು. ಸಮಾರಂಭಕ್ಕೂ ಮುನ್ನ ಗ್ರಾಮದಲ್ಲಿ ಉಭಯ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ಸಂಭ್ರಮದಿಂದ ಜರುಗಿತು. ಸಹಸ್ರಾರು ಭಕ್ತರು ಪಾಲ್ಗೊಂಡರು. ಕುಂಭ ಹೊತ್ತ ಮಹಿಳೆಯರು, ಆರತಿ ಹಿಡಿದ ಸುಮಂಗಲೆಯರು, ಭಜನಾ ತಂಡಗಳು ಹಾಗೂ ವೀರಗಾಸೆ ಕಲಾವಿದರು ಉತ್ಸವಕ್ಕೆ ಮೆರುಗು ತಂದರು. ಬಳಿಕ ಅನ್ನದಾಸೋಹ ನಡೆಯಿತು.

## ಕಾಮನ್‌ವೆಲ್ತ್ ಸಮ್ಮೇಳನದಲ್ಲಿ ಕರ್ನಾಟಕದ ಹಿರಿಮೆ ಅನಾವರಣ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ದಕ್ಷಿಣ ಆಫ್ರಿಕಾದ ಕೇಪ್‌ಟೌನ್‌ನಲ್ಲಿ ನಡೆಯುತ್ತಿರುವ 69ನೇ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನದ ಉದ್ಘಾಟನಾ ಕಾರ್ಯಕ್ರಮದಲ್ಲಿ ಕರ್ನಾಟಕ ವಿಧಾನಮಂಡಲದ ನಿಯೋಗವು ದಕ್ಷಿಣ ಆಫ್ರಿಕಾ ಗಣರಾಜ್ಯದ ರಾಷ್ಟ್ರೀಯ ಸಭೆಯ ಸಭಾಧ್ಯಕ್ಷೆ ಥೋಕೊ ದಿದಿಜಾ ಅವರಿಗೆ 'A Brochure on Karnataka' ಎಂಬ ವಿಶೇಷ ಕಿರುಹೊತ್ತಿಗೆಯನ್ನು ಅರ್ಪಿಸಿತು.

ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷ ಜಿ.ಎಸ್. ಪಾಟೀಲ ಅವರು ಪ್ರತಿನಿಧಿಯಾಗಿ ಹಾಗೂ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಸಲೀಂ ಅಹಮದ್ ಅವರು ವೀಕ್ಷಕರಾಗಿ ಒಳಗೊಂಡ ನಿಯೋಗವು ಕೇಪ್‌ಟೌನ್ ಅಂತರರಾಷ್ಟ್ರೀಯ ಸಮಾವೇಶ ಕೇಂದ್ರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಿರುಹೊತ್ತಿಗೆಯನ್ನು ಹಸ್ತಾಂತರಿಸಿತು. ಕರ್ನಾಟಕದ ಸಂಸದೀಯ ಪರಂಪರೆ, ಆಡಳಿತ ವ್ಯವಸ್ಥೆ, ಸಾಂಸ್ಕೃತಿಕ ವೈಭವ ಹಾಗೂ ಅಭಿವೃದ್ಧಿ ಸಾಧನೆಗಳನ್ನು ಅಂತರರಾಷ್ಟ್ರೀಯ ನಿಯೋಗಗಳಿಗೆ ಪರಿಚಯಿಸುವ ಉದ್ದೇಶದಿಂದ ಕಿರುಹೊತ್ತಿಗೆಯನ್ನು ಸಿದ್ಧಪಡಿಸಲಾಗಿದೆ. ಕರ್ನಾಟಕ ವಿಧಾನಮಂಡಲದ ಪರವಾಗಿ ಇದನ್ನು ಸಂಸದೀಯ ಸ್ನೇಹ ಹಾಗೂ ಸೌಹಾರ್ದದ ಸಂಕೇತವಾಗಿ ಅರ್ಪಿಸಲಾಯಿತು. ಕರ್ನಾಟಕದ ಸಂಸದೀಯ ಪರಂಪರೆ, ಸಾಂಸ್ಕೃತಿಕ ವೈಭವ ಹಾಗೂ ಅಭಿವೃದ್ಧಿ ಸಾಧನೆಗಳನ್ನು ಅಂತರರಾಷ್ಟ್ರೀಯ ವೇದಿಕೆಯಲ್ಲಿ ಪರಿಚಯಿಸುವುದು ರಾಜ್ಯದ ಹೆಮ್ಮೆಯ ಸಂಗತಿ.

## ಸಣ್ಣ ಸುದ್ದಿಗಳು

### ಕ್ರೀಡಾಂಗಣ ಅಭಿವೃದ್ಧಿಗೆ ಎಚ್.ಕೆ. ಪಾಟೀಲರ ಕಾಳಜಿ ಶ್ಲಾಘನೀಯ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಕ್ರೀಡಾಂಗಣವನ್ನು ಮತ್ತಷ್ಟು ಅಭಿವೃದ್ಧಿಪಡಿಸಿ ಕ್ರೀಡಾಪಟುಗಳು ಹಾಗೂ ಯುವಜನತೆಗೆ ಉತ್ತಮ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಕೈಗೊಳ್ಳಲಾಗುತ್ತಿರುವ ಅಭಿವೃದ್ಧಿ ಕಾರ್ಯಗಳಿಗೆ ಸಾಮಾಜಿಕ ಕಾರ್ಯಕರ್ತ ಸೈಯದ್ ಖಾಲಿದ್ ಕೊಪ್ಪಳ ಹರ್ಷ ವ್ಯಕ್ತಪಡಿಸಿದ್ದಾರೆ.



ಮಾಜಿ ಸಚಿವ ಹಾಗೂ ಗದಗ ಶಾಸಕ ಎಚ್.ಕೆ. ಪಾಟೀಲ ಅವರ ಸತತ ಪ್ರಯತ್ನ ಮತ್ತು ದೂರದೃಷ್ಟಿಯಿಂದ ಜಿಲ್ಲೆಯ ಕ್ರೀಡಾ ಕ್ಷೇತ್ರಕ್ಕೆ ಮತ್ತಷ್ಟು ಬಲ ಸಿಗುತ್ತಿರುವುದು ಸಂತಸದ ವಿಚಾರ. ಆಧುನಿಕ ಕ್ರೀಡಾ ಸೌಲಭ್ಯಗಳು ದೊರೆತರೆ ಫುಟ್‌ಬಾಲ್, ಕ್ರಿಕೆಟ್, ಅಥ್ಲೆಟಿಕ್ಸ್ ಸೇರಿದಂತೆ ವಿವಿಧ ಕ್ರೀಡೆಗಳ ಪ್ರತಿಭೆಗಳಿಗೆ ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಲು ಹೆಚ್ಚಿನ ಅವಕಾಶ ದೊರೆಯಲಿದೆ ಎಂದು ತಿಳಿಸಿದ್ದಾರೆ.

ಕ್ರೀಡಾಂಗಣದ ಅಭಿವೃದ್ಧಿ ರಾಜಕೀಯ ವಿಚಾರವಾಗಬಾರದು. ಇದು ಜಿಲ್ಲೆಯ ಯುವಕರ ಭವಿಷ್ಯದ ಪ್ರಶ್ನೆಯಾಗಿದ್ದು, ಅಭಿವೃದ್ಧಿ ಕಾರ್ಯಗಳಿಗೆ ಎಲ್ಲರೂ ಪಕ್ಷಾತೀತವಾಗಿ ಸಹಕರಿಸಬೇಕು. ಸಲಹೆ, ಸೂಚನೆಗಳಿದ್ದರೆ ಸರ್ಕಾರ ಹಾಗೂ ಜಿಲ್ಲಾಡಳಿತದ ಗಮನಕ್ಕೆ ಸಕಾರಾತ್ಮಕವಾಗಿ ತರಬೇಕು. ಆದರೆ ಅಭಿವೃದ್ಧಿಗೆ ಅಡ್ಡಿಪಡಿಸುವುದು ಸರಿಯಲ್ಲ ಎಂದು ಮನವಿ ಮಾಡಿದ್ದಾರೆ.

ಕ್ರೀಡಾಂಗಣದ ಅಭಿವೃದ್ಧಿ ಕೇವಲ ಮೈದಾನದ ಅಭಿವೃದ್ಧಿಯಲ್ಲ. ಇದು ಯುವಕರ ಆರೋಗ್ಯ, ಕ್ರೀಡಾ ಪ್ರತಿಭೆ, ಶಿಸ್ತು, ಆತ್ಮವಿಶ್ವಾಸ ಹಾಗೂ ಭವಿಷ್ಯ ರೂಪಿಸುವ ಹೂಡಿಕೆಯಾಗಿದೆ. ಗದಗವನ್ನು ಕ್ರೀಡಾ ಪ್ರತಿಭೆಗಳ ತವರೂರಾಗಿ ರೂಪಿಸಲು ಸರ್ಕಾರ, ಜಿಲ್ಲಾಡಳಿತ, ಕ್ರೀಡಾ ಸಂಘಟನೆಗಳು, ಕ್ರೀಡಾಪಟುಗಳು ಹಾಗೂ ಸಾರ್ವಜನಿಕರು ಕೈಜೋಡಿಸಬೇಕು ಎಂದು ಸೈಯದ್ ಖಾಲಿದ್ ಕೊಪ್ಪಳ ತಿಳಿಸಿದ್ದಾರೆ.

### ರಾಜಿರಹಿತ ಹೋರಾಟಗಾರರ ಬದ್ಧತೆ ಶ್ಲಾಘನೀಯ: ಪ್ರಭು ಚವಡಿ

## ಹೋರಾಟದಿಂದ ಸಂತ್ರಸ್ತ ಕುಟುಂಬಕ್ಕೆ ನ್ಯಾಯ



**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಜಿಗಳೂರು ರಸ್ತೆ ಅಪಘಾತದಲ್ಲಿ ಮೃತಪಟ್ಟ ಕುಟುಂಬದವರಿಗೆ ಹಾಗೂ ಗಾಯಾಳುಗಳಿಗೆ ಪರಿಹಾರ ಒದಗಿಸುವಲ್ಲಿ ಶ್ರಮಿಸಿದ ಹೋರಾಟಗಾರರನ್ನು ಸಂತ್ರಸ್ತ ಕುಟುಂಬದವರು ಹಾಗೂ 3ನೇ ವಾರ್ಡ್‌ನ ಹಿರಿಯರ ನೇತೃತ್ವದಲ್ಲಿ ಕಟ್ಟಿಬಸವೇಶ್ವರ ರಂಗಮಂದಿರದಲ್ಲಿ ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಪುರಸಭೆಯ ಮಾಜಿ ಸದಸ್ಯ ಪ್ರಭು ಚವಡಿ, ಸಂತ್ರಸ್ತ ಕುಟುಂಬದವರ ಪರ ನಿಂತು ಪರಿಹಾರ ಒದಗಿಸಲು ಹೋರಾಟಗಾರರು ತೋರಿದ ಬದ್ಧತೆ ಶ್ಲಾಘನೀಯ. ನೇರ, ನಿಷ್ಠುರ ಹಾಗೂ ರಾಜಿರಹಿತ ಹೋರಾಟದ ಮೂಲಕ ನೊಂದವರಿಗೆ ನ್ಯಾಯ ಒದಗಿಸಿದ್ದಾರೆ ಎಂದರು.

ಕರ್ನಾಟಕ ಪ್ರಾಂತ ರೈತ ಸಂಘದ ಕಾರ್ಯದರ್ಶಿ ಎಂ.ಎಸ್. ಹಡಪದ ಮಾತನಾಡಿ, ದುರ್ಘಟನೆಯಿಂದ ದುಡಿಮೆಯನ್ನೇ ಆಧಾರವಾಗಿಸಿಕೊಂಡಿದ್ದ ಕುಟುಂಬ ಬಡವಾಗಿದೆ. ಆಡಳಿತ ವ್ಯವಸ್ಥೆ ಸಂತ್ರಸ್ತರ ಕಣ್ಣೀರು ಒರೆಸಬೇಕಿತ್ತು. ಆದರೆ ಪರಿಹಾರಕ್ಕಾಗಿ ಬೀದಿಗಿಳಿದು ಹೋರಾಟ ನಡೆಸುವ ಪರಿಸ್ಥಿತಿ ನಿರ್ಮಾಣವಾಗಿರುವುದು ದುರಂತದ ಸಂಗತಿ ಎಂದರು. ಸಂತ್ರಸ್ತ ಕುಟುಂಬದವರೊಂದಿಗೆ ಸದಾ ನಾವಿದ್ದೇವೆ. ಹೋರಾಟದ ಮೇಲೆ ನಂಬಿಕೆ ಇರಲಿ ಎಂದರು.

ನ್ಯಾಯವಾದಿ ದಾವಲಸಾಬ ತಾಳಿಕೋಟಿ ಮಾತನಾಡಿ, ಘಟನೆ ನಡೆದು ಆರೇಳು ತಿಂಗಳು ಕಳೆದರೂ ಪರಿಹಾರ ನೀಡದೆ ಸರ್ಕಾರ ಹಾಗೂ ಜನಪ್ರತಿನಿಧಿಗಳು ನಿರ್ಲಕ್ಷ್ಯ ತೋರಿದ್ದು ಸಮಂಜಸವಲ್ಲ. ಸಂತ್ರಸ್ತ ಕುಟುಂಬದ ಪರವಾಗಿ ನಿಂತು ಹೋರಾಟ ನಡೆಸಿ ನ್ಯಾಯ ಒದಗಿಸುವ ಪ್ರಾಮಾಣಿಕ ಪ್ರಯತ್ನ ಮಾಡಿದ್ದೇವೆ. ಆಡಳಿತ ವ್ಯವಸ್ಥೆ ಮಾನವೀಯ ನೆಲೆಯಲ್ಲಿ ತಕ್ಷಣ ನೆರವು ನೀಡಬೇಕಿತ್ತು. ಹೋರಾಟದ ಮೂಲಕ ಪರಿಹಾರ ಪಡೆಯಬೇಕಾದ ಪರಿಸ್ಥಿತಿ ಬೇಸರ ತಂದಿದೆ. ಓಣಿಯ ಪ್ರತಿಯೊಬ್ಬರ ಸಹಕಾರ ಮತ್ತು ಶ್ರಮದಿಂದಲೇ ಹೋರಾಟಕ್ಕೆ ಜಯ ಸಿಕ್ಕಿದೆ ಎಂದರು.

ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಸವರಾಜ ಕೊಟಗಿ, ಬಾಲು ರಾಠೋಡ ಹಾಗೂ ಪೀರು ರಾಠೋಡ ಮಾತನಾಡಿದರು. ಇದೇ ವೇಳೆ ಎಂ.ಎಸ್. ಹಡಪದ, ನ್ಯಾಯವಾದಿ ದಾವಲಸಾಬ ತಾಳಿಕೋಟಿ, ಬಾಲು ರಾಠೋಡ, ಪೀರು ರಾಠೋಡ, ಮೆಹಬೂಬ್ ಹವಾಲ್ದಾರ್ ಹಾಗೂ ಚಂದ್ರು ರಾಠೋಡ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜು ಹೊಸಮನಿ, ಪರಸಪ್ಪ ಹೊಸಮನಿ, ಶ್ರೀಧರ ಸರಗಣಾಚಾರಿ, ಬಸವರಾಜ ಹೊಸಮನಿ, ರಾಜು ಕೇಶಣ್ಣವರ, ಮೈಬು ಹುನಗುಂದ, ಮಾಸುಮಲಿ ಮದಗಾರ, ಚಂದ್ರು ಚಂಗಳಿ, ಐಹೋಳೆಪ್ಪ ಹಾಳಕೇರಿ, ಪ್ರಕಾಶ ಬಳಿಗೇರ, ವೀರೇಶ ಸರಗಣಾಚಾರಿಮಠ, ಮಂಜು ಚವ್ಹಾಣ, ವಿನಾಯಕ ಕೊಟಗಿ, ಆನಂದ ಆಲಾಪೂರ, ಚಂದ್ರು ಆಲಾಪೂರ, ರವಿ ವಡಗೇರಿ, ಪ್ರದೀಪ್ ಗೊಂಗಡಶೆಟ್ಟಿಮಠ, ಪ್ರವೀಣ ಆಲಾಪೂರ, ಗಣೇಶ ರಾಠೋಡ, ಚೆನ್ನಪ್ಪ ಗುಗಲೋತ್ತರ, ಬಸು ಸರಗಣಾಚಾರಿ, ರೇಣುಕರಾಜ ಮಡಿವಾಳರ, ಅನಿಲ ಚವಡಿ, ರವಿ ಹೊಸಮನಿ, ಅಬ್ಬು ಮದಗಾರ, ವಿನಾಯಕ ಹೊಸಮನಿ ಸೇರಿದಂತೆ ವಾರ್ಡಿನ ನಿವಾಸಿಗಳು ಉಪಸ್ಥಿತರಿದ್ದರು. ಮಾಸುಮಲಿ ಮದಗಾರ ನಿರೂಪಿಸಿದರು.

> ಸಂತ್ರಸ್ತ ಕುಟುಂಬದ ಪರ ನಿಂತು ಪರಿಹಾರ ಒದಗಿಸಿದ ಹೋರಾಟಗಾರರ ಬದ್ಧತೆ ನಿಜಕ್ಕೂ ಶ್ಲಾಘನೀಯ. ರಾಜಿರಹಿತ ಹೋರಾಟದ ಮೂಲಕ ನೊಂದವರಿಗೆ ನ್ಯಾಯ ಒದಗಿಸಿದ್ದಾರೆ.
>
> **– ಪ್ರಭು ಚವಡಿ, ಪುರಸಭೆ ಮಾಜಿ ಸದಸ್ಯ**

### ರೋಣ ತಾಲೂಕಿನ ಎಲ್ಲ ಗ್ರಾಪಂಗಳಲ್ಲಿ ವಿಶೇಷ ಉದ್ಯೋಗ ಬೇಡಿಕೆ ಅಭಿಯಾನ

# ಫಾರ್ಮ್ ನಂ.6 ಸಲ್ಲಿಸಿ, ಗ್ರಾಮದಲ್ಲೇ ಕೆಲಸ ಪಡೆಯಿರಿ

**ವಿಜಯಸಾಕ್ಷಿ ಸುದ್ದಿ, ರೋಣ**

ಗ್ರಾಮದಲ್ಲೇ ಉದ್ಯೋಗ ಸಿಗಲಿ, ಕೂಲಿಗಾಗಿ ದೂರದ ಊರುಗಳಿಗೆ ವಲಸೆ ಹೋಗುವ ಪರಿಸ್ಥಿತಿ ತಪ್ಪಲಿ ಎಂಬ ಉದ್ದೇಶದಿಂದ ರೋಣ ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಫಾರ್ಮ್ ನಂ.6 ಮೂಲಕ ಉದ್ಯೋಗ ಬೇಡಿಕೆ ಸಲ್ಲಿಸುವ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ವಿಬಿ–ಜಿ ರಾಮ್ (ಜಿ) ಯೋಜನೆಯಡಿ ಉದ್ಯೋಗ ಪಡೆಯಲು ಇಚ್ಛಿಸುವ ಗ್ರಾಮೀಣ ಕುಟುಂಬಗಳು ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯಿತಿಗೆ ತೆರಳಿ ಫಾರ್ಮ್ ನಂ.6 ಸಲ್ಲಿಸಬೇಕು. ಕೆಲಸದ ಅಗತ್ಯವಿರುವ ಕುಟುಂಬಗಳನ್ನು ಗುರುತಿಸಿ, ಲಭ್ಯವಿರುವ ಕಾಮಗಾರಿಗಳ ಆಧಾರದ ಮೇಲೆ ಉದ್ಯೋಗ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತದೆ.

ಈ ಹಿಂದೆ ನರೇಗಾ ಯೋಜನೆಯಡಿ ಜಾಬ್‌ಕಾರ್ಡ್ ಹೊಂದಿರುವ





ಕುಟುಂಬಗಳಿಗೂ ಹೊಸ ಯೋಜನೆಯಡಿ ಉದ್ಯೋಗ ಪಡೆಯಲು ಅವಕಾಶವಿದೆ. ಈ–ಕೆವೈಸಿ ಪೂರ್ಣಗೊಂಡಿರುವ ಹಳೆಯ ಉದ್ಯೋಗ ಚೀಟಿಗಳನ್ನು ಆರಂಭಿಕ ಹಂತದಲ್ಲಿ ಮಾನ್ಯಗೊಳಿಸಲಾಗಿದ್ದು, ಹೊಸದಾಗಿ ಉದ್ಯೋಗ ಬಯಸುವ ಕುಟುಂಬಗಳಿಗೂ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ.

ಫಾರ್ಮ್ ನಂ.6 ಸಲ್ಲಿಸಿದ ಬಳಿಕ ಗ್ರಾಮ ಪಂಚಾಯಿತಿ ಅಧಿಕಾರಿಗಳು ಅರ್ಜಿ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅರ್ಹ ಕುಟುಂಬಗಳ ವಿವರ ದಾಖಲಿಸಿಕೊಳ್ಳಲಿದ್ದಾರೆ. ಹೀಗಾಗಿ ಉದ್ಯೋಗ ಚೀಟಿ ಹೊಂದಿರುವುದರ ಜತೆಗೆ ಕೆಲಸದ ಬೇಡಿಕೆಯನ್ನೂ ಅಧಿಕೃತವಾಗಿ ಸಲ್ಲಿಸುವುದು ಅಗತ್ಯವಾಗಿದೆ.



> ಕೆಲಸದ ಅಗತ್ಯವಿರುವವರು ಗ್ರಾಮ ಪಂಚಾಯಿತಿಗೆ ತೆರಳಿ ಫಾರ್ಮ್ ನಂ.6 ಮೂಲಕ ಅರ್ಜಿ ಸಲ್ಲಿಸಬೇಕು. ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ ಅರ್ಹರಿಗೆ ನಿಯಮಾನುಸಾರ ಉದ್ಯೋಗ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು.
>
> **– ಚಂದ್ರಶೇಖರ ಬಿ. ಕಂದಕೂರ,**
> **ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಪಂಚಾಯಿತಿ, ರೋಣ**

ಯೋಜನೆಯಡಿ ದಿನಕ್ಕೆ ₹382 ಕೂಲಿ ನಿಗದಿಯಾಗಿದ್ದು, ಅರ್ಹ ಗ್ರಾಮೀಣ ಕುಟುಂಬಗಳಿಗೆ ವರ್ಷದಲ್ಲಿ ಗರಿಷ್ಠ 125 ದಿನಗಳವರೆಗೆ ಉದ್ಯೋಗ ಕಲ್ಪಿಸುವ ಉದ್ದೇಶವಿದೆ. ಜಲಸಂರಕ್ಷಣೆ, ಗ್ರಾಮೀಣ ಮೂಲಸೌಕರ್ಯ, ಜೀವನೋಪಾಯ ಹಾಗೂ ಹವಾಮಾನ ಸಂಬಂಧಿತ ವಿವಿಧ ಕಾಮಗಾರಿಗಳಲ್ಲಿ ಸ್ಥಳೀಯ ಕಾರ್ಮಿಕರಿಗೆ ಉದ್ಯೋಗ ದೊರೆಯಲಿದೆ.

ಕೃಷಿ ಕೆಲಸ ಕಡಿಮೆಯಾಗುವ ಅವಧಿಯಲ್ಲಿ ಗ್ರಾಮದಲ್ಲಿಯೇ ಉದ್ಯೋಗ ದೊರೆಯುವುದರಿಂದ ಕುಟುಂಬಗಳ ಆದಾಯಕ್ಕೆ ನೆರವಾಗುವುದರ ಜತೆಗೆ, ಉದ್ಯೋಗಕ್ಕಾಗಿ ನಗರ ಹಾಗೂ ಹೊರ ಜಿಲ್ಲೆಗಳಿಗೆ ವಲಸೆ ಹೋಗುವ ಪ್ರಮಾಣವೂ ಕಡಿಮೆಯಾಗುವ ನಿರೀಕ್ಷೆಯಿದೆ.

### ಶಿಕ್ಷಕರು ಭವಿಷ್ಯ ರೂಪಿಸುವ ಶಿಲ್ಪಿಗಳು: ಸಂಕನೂರ

## ಎಲ್ಲಾ ಸೇವೆಗಿಂತ ಶಿಕ್ಷಕರ ಸೇವೆ ಮಿಗಿಲು



**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಕರು ಸಮಾಜದ ಆಸ್ತಿ. ಅವರು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಶಿಲ್ಪಿಗಳಾಗಿದ್ದು, ಶಿಕ್ಷಣ ನೀಡಿ ಸಮಾಜ ನಿರ್ಮಾಣ ಮಾಡುವ ಶಿಕ್ಷಕರ ಸೇವೆ ಎಲ್ಲ ಸೇವೆಗಿಂತಲೂ ಮಿಗಿಲಾದದ್ದು ಎಂದು ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವಿ.ಸಂಕನೂರ ಹೇಳಿದರು.

ಹೊಳೆಆಲೂರಿನ ಎಸ್.ಎಸ್.ಆಡಿನ ಜನಸೇವಾ ಸಂಸ್ಥೆ ವತಿಯಿಂದ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ 138ನೇ ಜನ್ಮದಿನದ ಅಂಗವಾಗಿ ಜೆ.ಟಿ. ಮಹಾವಿದ್ಯಾಲಯದ ಸಭಾಭವನದಲ್ಲಿ ನಡೆದ ಶಿಕ್ಷಕರ ದಿನಾಚರಣೆ, 'ಉತ್ತಮ ಶಿಕ್ಷಕ ರಾಜ್ಯ ಪ್ರಶಸ್ತಿ' ಪ್ರದಾನ, ನಿವೃತ್ತ ಹಾಗೂ ಸಾಧಕ ಶಿಕ್ಷಕರ ಸನ್ಮಾನ, 'ವಸುಂಧರೆ' ಕವನ ಸಂಕಲನ ಬಿಡುಗಡೆ ಮತ್ತು ಕಲಾ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕರ ಸಮಸ್ಯೆ ಹಾಗೂ ಬೇಡಿಕೆಗಳಿಗೆ ಸೂಕ್ತ ಸ್ಪಂದನೆ ನೀಡಿದ್ದು, ಮುಂದೆಯೂ ಶಿಕ್ಷಕರ ಸೇವೆಗೆ ಬದ್ಧನಾಗಿರುವುದಾಗಿ ತಿಳಿಸಿದರು. ಶಿಕ್ಷಕರನ್ನು ಗೌರವಿಸುವುದರೊಂದಿಗೆ ಪ್ರತಿಭಾವಂತರನ್ನು ಪ್ರೋತ್ಸಾಹಿಸಿ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವ ಆಡಿನ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದರು.

ಭೈರನಹಟ್ಟಿ ದೊರೆಸ್ವಾಮಿ ವಿರಕ್ತಮಠದ ಶಾಂತಲಿಂಗ ಮಹಾಸ್ವಾಮಿಗಳು ಮಾತನಾಡಿ, ಶಿಕ್ಷಣದಿಂದ ಸಮಾಜ ಪರಿವರ್ತನೆಯತ್ತ ಸಾಗುತ್ತಿದೆ. ಅಂತಹ ಶಿಕ್ಷಣ ನೀಡಿದ ಶಿಕ್ಷಕರನ್ನು ಸ್ಮರಿಸುವುದು ಕೃತಜ್ಞತೆಯ ಸಂಕೇತ. ಡಾ.ರಾಧಾಕೃಷ್ಣನ್ ಅವರಂತೆ ಸಾವಿತ್ರಿಬಾಯಿ ಫುಲೆ ಅವರನ್ನೂ ಸ್ಮರಿಸುವ ಕಾರ್ಯವಾಗಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

'ವಸುಂಧರೆ' ಕವನ ಸಂಕಲನ ಬಿಡುಗಡೆಗೊಳಿಸಿದ ಉತ್ತಮ ಶಿಕ್ಷಕ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಎಸ್.ಎನ್.ಬಳ್ಳಾರಿ, ಶಿಕ್ಷಣದ ಜತೆಗೆ ಸಾಹಿತ್ಯ, ಕಲೆ, ಸಂಸ್ಕೃತಿ ಹಾಗೂ ಸಾಮಾಜಿಕ ಸೇವೆಗೆ ವೇದಿಕೆ ಕಲ್ಪಿಸುತ್ತಿರುವ ಸಂಸ್ಥೆಯ ಕಾರ್ಯವನ್ನು ಶ್ಲಾಘಿಸಿದರು.

ಜೆ.ಟಿ. ವಿದ್ಯಾಪೀಠದ ಆಡಳಿತಾಧಿಕಾರಿ ಶಿವಾನಂದ ಎಸ್.ಪಟ್ಟಣಶೆಟ್ಟಿ ಮಾತನಾಡಿ, ಶಿಕ್ಷಕರನ್ನು ಗೌರವಿಸುವುದು ಜ್ಞಾನವನ್ನು ಗೌರವಿಸಿದಂತೆ ಎಂದರು. ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ.ನಂದಾ ಹಣಬರಟ್ಟಿ ತಮ್ಮ ಬಾಲ್ಯದ ಗುರುಗಳನ್ನು ಸ್ಮರಿಸಿದರು.

ಸಂಸ್ಥೆಯ ಅಧ್ಯಕ್ಷೆ ಶೋಭಾ ಎಸ್.ಆಡಿನ ಅಧ್ಯಕ್ಷತೆ ವಹಿಸಿ, ಶಿಕ್ಷಕರು ಮಕ್ಕಳ ಬದುಕು ರೂಪಿಸುವ ಶಿಲ್ಪಿಗಳು. ನಿವೃತ್ತ ಶಿಕ್ಷಕರು ಬಿತ್ತಿದ ಜ್ಞಾನದ ಬೀಜಗಳು ತಲೆಮಾರುಗಳವರೆಗೆ ಫಲ ನೀಡುತ್ತವೆ ಎಂದರು. ಸಮಾರಂಭದಲ್ಲಿ 'ಉತ್ತಮ ಶಿಕ್ಷಕ ರಾಜ್ಯ ಪ್ರಶಸ್ತಿ–2026' ಪ್ರದಾನ ಮಾಡಿ, ರಾಜ್ಯ, ಜಿಲ್ಲಾ ಹಾಗೂ ತಾಲೂಕು ಮಟ್ಟದ ಪ್ರಶಸ್ತಿ ಪುರಸ್ಕೃತರು ಮತ್ತು ನಿವೃತ್ತ ಶಿಕ್ಷಕರನ್ನು ಸನ್ಮಾನಿಸಲಾಯಿತು. ವಚನಗೀತೆ, ಸಂಗೀತ, ಚಿತ್ರಕಲೆ ಹಾಗೂ ಗಾಂಧಾರಿ ವಿದ್ಯಾ ಪ್ರದರ್ಶನಗಳು ಗಮನ ಸೆಳೆದವು.

ಬಸವರಾಜ ಎಂ.ಕಡೆಮನಿ, ವಿವೇಕಾನಂದಗೌಡ ಪಾಟೀಲ, ಡಿ.ಎಸ್.ತಳವಾರ, ಎಸ್.ಕೆ.ಆಡಿನ, ಪಾಂಡುರಂಗ ಪತ್ತಾರ ಸೇರಿದಂತೆ ಗಣ್ಯರು, ಸಂಸ್ಥೆಯ ಪದಾಧಿಕಾರಿಗಳು, ಶಿಕ್ಷಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

### ಆಂತರಿಕ ನಿಯಂತ್ರಣ, ತಂತ್ರಜ್ಞಾನ ಭದ್ರತೆಗೆ ಆದ್ಯತೆ

## ಸಹಕಾರ ಕ್ಷೇತ್ರಕ್ಕೆ ವಂಚನೆ ಕಂಟಕ; ಎಚ್ಚರಿಕೆ ಅಗತ್ಯ



**ವಿಜಯಸಾಕ್ಷಿ ಸುದ್ದಿ, ಗದಗ**

ತಂತ್ರಜ್ಞಾನ ಬಳಕೆ ಹೆಚ್ಚಿದಂತೆ ಸಹಕಾರ ಬ್ಯಾಂಕ್‌ಗಳು ಹಾಗೂ ಪತ್ತಿನ ಸಂಘಗಳಲ್ಲಿ ವಂಚನೆಯ ಅಪಾಯವೂ ಹೆಚ್ಚುತ್ತಿದ್ದು, ಅದನ್ನು ತಡೆಯಲು ಕಟ್ಟುನಿಟ್ಟಿನ ಆಂತರಿಕ ನಿಯಂತ್ರಣ, ಪರಿಣಾಮಕಾರಿ ಲೆಕ್ಕಪರಿಶೋಧನೆ ಹಾಗೂ ತಂತ್ರಜ್ಞಾನ ಆಧಾರಿತ ಭದ್ರತಾ ಕ್ರಮಗಳನ್ನು ಅಳವಡಿಸಿಕೊಳ್ಳುವುದು ಅನಿವಾರ್ಯ ಎಂದು ಮರ್ಚಂಟ್ಸ್ ಲಿಬರಲ್ ಕೋ–ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಮೋಹನ್ ಟಿ. ಕೋಟಿ ಹೇಳಿದರು.

ಗದಗ ಜಿಲ್ಲಾ ಸಹಕಾರ ಯೂನಿಯನ್, ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಹಾಗೂ ಮರ್ಚಂಟ್ಸ್ ಲಿಬರಲ್ ಕೋ–ಆಪರೇಟಿವ್ ಬ್ಯಾಂಕ್ ಸಂಯುಕ್ತ ಆಶ್ರಯದಲ್ಲಿ ನಗರದ ಬ್ಯಾಂಕ್ ಸಭಾಭವನದಲ್ಲಿ ಅರ್ಬನ್ ಬ್ಯಾಂಕುಗಳು ಹಾಗೂ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ವ್ಯವಸ್ಥಾಪಕರು ಮತ್ತು ಮುಖ್ಯ ಕಾರ್ಯನಿರ್ವಾಹಕರಿಗಾಗಿ ಆಯೋಜಿಸಿದ್ದ ಒಂದು ದಿನದ ವಿಶೇಷ ತರಬೇತಿ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಸಾಲ ವಂಚನೆ, ನಕಲಿ ಸದಸ್ಯರ ಹೆಸರಿನಲ್ಲಿ ಸಾಲ ಮಂಜೂರು, ಒಂದೇ ಆಸ್ತಿಯ ಮೇಲೆ ಬಹು ಸಾಲ, ದಾಖಲೆಗಳ ಮೌಲ್ಯವನ್ನು ಕೃತಕವಾಗಿ ಹೆಚ್ಚಿಸುವುದು ಸೇರಿದಂತೆ ಹಲವು ರೀತಿಯ ವಂಚನೆಗಳು ನಡೆಯುತ್ತಿವೆ. ಒಟಿಪಿ, ಪಿನ್, ಪಾಸ್‌ವರ್ಡ್ ಕಳವು, ನಕಲಿ ಬ್ಯಾಂಕ್ ಲಿಂಕ್‌ಗಳು, ಮೊಬೈಲ್ ಆ್ಯಪ್‌ಗಳು, ಇಂಟರ್‌ನೆಟ್ ಬ್ಯಾಂಕಿಂಗ್ ಹಾಗೂ ಕ್ಯೂಆರ್ ಕೋಡ್ ಮೂಲಕವೂ ವಂಚನೆ ನಡೆಯುವ ಸಾಧ್ಯತೆ ಇರುವುದರಿಂದ ಸಿಬ್ಬಂದಿ ಮತ್ತು ಸದಸ್ಯರಲ್ಲಿ ನಿರಂತರ ಜಾಗೃತಿ ಮೂಡಿಸಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ ಮಾತನಾಡಿ, ಸಹಕಾರ ಸಂಸ್ಥೆಗಳು ಜನರ ವಿಶ್ವಾಸದ ಮೇಲೆ ನಿಂತಿವೆ. ಜಾಗೃತಿ, ಪಾರದರ್ಶಕ ಆಡಳಿತ, ಕಟ್ಟುನಿಟ್ಟಿನ ಆಂತರಿಕ ನಿಯಂತ್ರಣ ಹಾಗೂ ಪರಿಣಾಮಕಾರಿ ಆಡಿಟ್ ಮೂಲಕ ವಂಚನೆಗಳನ್ನು ಗಣನೀಯವಾಗಿ ಕಡಿಮೆ ಮಾಡಬಹುದು ಎಂದರು.

ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಸಹಕಾರ ಕ್ಷೇತ್ರದ ಅಭಿವೃದ್ಧಿಗೆ ನೆರವಾಗಬಲ್ಲದು. ಆದರೆ ಎಐ ಬಳಕೆಯಲ್ಲಿ ನೈತಿಕತೆ, ಕಾನೂನು, ಗೌಪ್ಯತೆ, ಸುರಕ್ಷತೆ, ಪಾರದರ್ಶಕತೆ ಹಾಗೂ ಮಾನವ ಮೇಲ್ವಿಚಾರಣೆಗೆ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ತರಬೇತಿ ಶಿಬಿರದಲ್ಲಿ ಚಾರ್ಟರ್ಡ್ ಅಕೌಂಟೆಂಟ್‌ಗಳಾದ ಬಿ.ವಿ. ರವೀಂದ್ರನಾಥ ಹಾಗೂ ವರುಣ್ ಭಟ್ ವಿವಿಧ ವಿಷಯಗಳ ಕುರಿತು ಉಪನ್ಯಾಸ ನೀಡಿದರು. ಬ್ಯಾಂಕಿಂಗ್ ಮತ್ತು ಪತ್ತಿನ ಕ್ಷೇತ್ರದಲ್ಲಿನ ವಂಚನೆಗಳ ಗುರುತಿಸುವಿಕೆ, ತಡೆ ಕ್ರಮಗಳು ಹಾಗೂ ಎಐ ತಂತ್ರಜ್ಞಾನದ ಪ್ರಾಯೋಗಿಕ ಬಳಕೆಯ ಕುರಿತು ತರಬೇತಿ ನೀಡಲಾಯಿತು.

> ವಂಚನೆ ತಡೆಗೆ ಜಾಗೃತಿ ಮಾತ್ರವಲ್ಲ, ಕಟ್ಟುನಿಟ್ಟಿನ ನಿಯಂತ್ರಣ ವ್ಯವಸ್ಥೆಯೂ ಅಗತ್ಯ. ಪ್ರತಿಯೊಬ್ಬ ಸದಸ್ಯ, ಸಿಬ್ಬಂದಿ ಹಾಗೂ ಆಡಳಿತ ಮಂಡಳಿಯ ಜವಾಬ್ದಾರಿ ಇದರಲ್ಲಿ ಮಹತ್ವದ್ದಾಗಿದೆ.
>
> **– ಸಿ.ಎಂ. ಪಾಟೀಲ,**
> **ಅಧ್ಯಕ್ಷರು, ಗದಗ ಜಿಲ್ಲಾ ಸಹಕಾರ ಯೂನಿಯನ್**

ಕಾರ್ಯಕ್ರಮದಲ್ಲಿ ಮರ್ಚಂಟ್ಸ್ ಲಿಬರಲ್ ಕೋ–ಆಪರೇಟಿವ್ ಬ್ಯಾಂಕ್ ಉಪಾಧ್ಯಕ್ಷ ಕೆ.ಎಸ್. ಪರ್ವತಗೌಡ್ರ, ನಿರ್ದೇಶಕರಾದ ವಿ.ಸಿ. ರಾಮನಕೊಪ್ಪ, ಟಿ.ಆರ್. ಭಾಂಡಗೆ, ಎಸ್.ಬಿ. ಅಬ್ಬಿಗೇರಿ, ಸಿ.ಎಸ್. ಸಂಕಣ್ಣವರ, ಎಸ್.ಎಚ್. ನಡವಲಗುಡ್ಡ ಹಾಗೂ ಸಿ.ಟಿ. ದುಂದೂರ, ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಎಸ್.ಕೆ. ಕುರಡಗಿ, ಹಿರಿಯ ಲೆಕ್ಕಪರಿಶೋಧಕಿ ಜೆ.ಎನ್. ಮಾಳೆಕೊಪ್ಪ ಹಾಗೂ ಸಹಕಾರ ಅಭಿವೃದ್ಧಿ ಅಧಿಕಾರಿ ಬಿ.ಆರ್. ನಿಡಗುಂದಿ ಉಪಸ್ಥಿತರಿದ್ದರು.

### ಪೂರ್ಣ ಗೀತೆ ಹಾಡಲು ಅವಕಾಶ ನೀಡಿ: ಲಿಂಗರಾಜ ಪಾಟೀಲ

## ವಂದೇ ಮಾತರಂನಲ್ಲಿ ಸರ್ಕಾರ ರಾಷ್ಟ್ರ ಭಕ್ತಿ ಮೆರೆಯಲಿ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರಭಕ್ತಿಯ ಪ್ರತೀಕವಾದ ವಂದೇ ಮಾತರಂ ಗೀತೆಯನ್ನು ಕೇವಲ ಎರಡು ಚರಣಗಳಿಗೆ ಸೀಮಿತಗೊಳಿಸಿರುವ ರಾಜ್ಯ ಸರ್ಕಾರ ತನ್ನ ನಿಲುವಿನಿಂದ ಹಿಂದೆ ಸರಿದು, ಗೀತೆಯ ಪೂರ್ಣರೂಪಕ್ಕೆ ಗೌರವ ನೀಡಬೇಕು ಎಂದು ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ ಆಗ್ರಹಿಸಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿರುವ ಅವರು, ವಂದೇ ಮಾತರಂ ಗೀತೆಯನ್ನು ಎರಡು ಚರಣಗಳಿಗೆ ಸೀಮಿತಗೊಳಿಸಿ ಹಾಡುವಂತೆ ರಾಜ್ಯ ಸರ್ಕಾರ ಸೂಚಿಸಿರುವುದು ಖಂಡನೀಯ. ಇದು ವಂದೇ ಮಾತರಂ ಗೀತೆಗೆ ಮಾತ್ರವಲ್ಲದೆ, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಹೋರಾಟಗಾರರಿಗೆ ಮಾಡಿರುವ ಅವಮಾನ ಎಂದು ಟೀಕಿಸಿದ್ದಾರೆ. ವಂದೇ ಮಾತರಂ ಭಾರತದ ಸ್ವಾತಂತ್ರ್ಯ



ಹೋರಾಟದ ಚೈತನ್ಯ, ತ್ಯಾಗ ಹಾಗೂ ರಾಷ್ಟ್ರ ಭಕ್ತಿಯ ಪ್ರತೀಕ. ಇಂತಹ ಐತಿಹಾಸಿಕ ಗೀತೆಯನ್ನು ಮೊಟಕುಗೊಳಿಸುವುದು ಅದರ ಪರಂಪರೆ ಹಾಗೂ ಇತಿಹಾಸವನ್ನು ಕುಗ್ಗಿಸಿದಂತಾಗುತ್ತದೆ ಎಂದು ಹೇಳಿದ್ದಾರೆ.

ರಾಜ್ಯ ಕಾಂಗ್ರೆಸ್ ಸರ್ಕಾರವು ತುಷ್ಟೀಕರಣ ರಾಜಕಾರಣಕ್ಕಾಗಿ ವಂದೇ ಮಾತರಂ ವಿಚಾರದಲ್ಲಿ ಇಂತಹ ನಿರ್ಧಾರ ಕೈಗೊಂಡಿದೆ ಎಂದು ಆರೋಪಿಸಿದ ಅವರು, ಸಂವಿಧಾನದ ಆಶಯಗಳ ಬಗ್ಗೆ ಮಾತನಾಡುವ ಕಾಂಗ್ರೆಸ್ ನಾಯಕರು ಈ ವಿಚಾರದಲ್ಲಿ ದ್ವಂದ್ವ ನಿಲುವು ತಾಳುತ್ತಿರುವುದು ಖಂಡನೀಯ ಎಂದಿದ್ದಾರೆ. ಇಲ್ಲವಾದರೆ ರಾಜ್ಯದ ಜನರ ಆಕ್ರೋಶವನ್ನು ಎದುರಿಸಬೇಕಾಗುತ್ತದೆ ಎಂದು ಲಿಂಗರಾಜ ಪಾಟೀಲ ಎಚ್ಚರಿಸಿದ್ದಾರೆ.

> ವಂದೇ ಮಾತರಂ ಕೇವಲ ಗೀತೆಯಲ್ಲ; ಅದು ಸ್ವಾತಂತ್ರ್ಯ ಹೋರಾಟದ ಚೈತನ್ಯ ಮತ್ತು ರಾಷ್ಟ್ರಭಕ್ತಿಯ ಪ್ರತೀಕ. ಇಂತಹ ಐತಿಹಾಸಿಕ ಗೀತೆಯನ್ನು ಮೊಟಕುಗೊಳಿಸುವ ನಿರ್ಧಾರವನ್ನು ಬಿಜೆಪಿ ಎಂದಿಗೂ ಒಪ್ಪುವುದಿಲ್ಲ.
>
> **– ಲಿಂಗರಾಜ ಪಾಟೀಲ ಮಲ್ಲಾಪೂರ,**
> **ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ**

## ಪರಸಪ್ಪ ತಳವಾರಗೆ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಷಣ್ಮುಖ ಶಿವಯೋಗಿ ಸ್ಮಾರಕ ಆಂದೋಲ ಸಂಗನಗೌಡ ಪೊಲೀಸ್ ಪಾಟೀಲ್ ಹಿರಿಯ ಪ್ರಾಥಮಿಕ ಶಾಲೆಯ ದೈಹಿಕ ಶಿಕ್ಷಕ ಪರಸಪ್ಪ ಎನ್. ತಳವಾರ ಅವರಿಗೆ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸೇವಾರತ್ನ ಹಾಗೂ ಖ್ಯಾತ ಶಿಕ್ಷಣ ತಜ್ಞರಾದ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ್, ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿಗಳೂ ಆಗಿದ್ದು, ಪ್ರಶಸ್ತಿ ಪ್ರದಾನ ಮಾಡಿದರು.

ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಮತ್ತು ದೈಹಿಕ ಬೆಳವಣಿಗೆಗೆ ನೀಡಿದ ಕೊಡುಗೆಯನ್ನು ಪರಿಗಣಿಸಿ ಪರಸಪ್ಪ ಎನ್. ತಳವಾರ ಅವರಿಗೆ ಈ ಗೌರವ ನೀಡಲಾಗಿದೆ.

ಸಮಾರಂಭದಲ್ಲಿ ಬೈರನಹಟ್ಟಿ ದೊರೆಸ್ವಾಮಿ



ವಿರಕ್ತ ಮಠದ ಪರಮಪೂಜ್ಯ ಶ್ರೀ ಶಾಂತಲಿಂಗ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಿದ್ದರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಹೊಳೆಆಲೂರಿನ ಎಸ್.ಎಸ್. ಆಡಿನ ಜನಸೇವಾ ಸಂಸ್ಥೆಯ ಅಧ್ಯಕ್ಷೆ ಶ್ರೀಮತಿ ಶೋಭಾ ಎಸ್. ಆಡಿನ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

## ಮಕ್ಕಳ ಪ್ರತಿಭೆಗೆ ವೇದಿಕೆ ಕಲ್ಪಿಸಿ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಇಂದಿನ ಮಕ್ಕಳು ಪ್ರತಿಭಾವಂತರಾಗಿದ್ದು, ಶಿಕ್ಷಣದ ಜತೆಗೆ ನೃತ್ಯ, ಸಂಗೀತ, ವೇಷಭೂಷಣ ಸೇರಿದಂತೆ ಪಠ್ಯೇತರ ಚಟುವಟಿಕೆಗಳಲ್ಲೂ ಭಾಗವಹಿಸುವಂತೆ ಪಾಲಕರು ಪ್ರೋತ್ಸಾಹಿಸಬೇಕು ಎಂದು ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಹೇಳಿದರು.

ನಗರದ ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ಯುವ ಡಾನ್ಸ್ ಅಕಾಡೆಮಿ ಆಯೋಜಿಸಿದ್ದ ಯುವ ಕೃಷ್ಣ–ಯುವ ರಾಧೆ 2026, ಸೀಸನ್–2 ಮಕ್ಕಳ ಫ್ಯಾಷನ್ ಶೋ, ವೇಷಭೂಷಣ ಸ್ಪರ್ಧೆ ಹಾಗೂ ಸಾಂಸ್ಕೃತಿಕ ಪ್ರತಿಭೋತ್ಸವ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳು ಮೊಬೈಲ್ ಅವಲಂಬನೆಯಿಂದ ಹೊರಬಂದು ಸೃಜನಶೀಲ ಹಾಗೂ ದೈಹಿಕ ಚಟುವಟಿಕೆಗಳಲ್ಲಿ ತೊಡಗುವಂತೆ ಪಾಲಕರು ಗಮನಹರಿಸಬೇಕು. ಯುವ ಡಾನ್ಸ್ ಅಕಾಡೆಮಿ ಕಳೆದ ಹಲವು ವರ್ಷಗಳಿಂದ ಮಕ್ಕಳ ಪ್ರತಿಭೆ ಉತ್ತೇಜಿಸುವ ಜತೆಗೆ ಸಮಾಜಮುಖಿ ಹಾಗೂ ಪರಿಸರ ಕಾಳಜಿಯ ಕಾರ್ಯಕ್ರಮಗಳನ್ನು ನಡೆಸುತ್ತಿರುವುದು ಶ್ಲಾಘನೀಯ ಎಂದರು.

ಡಾ. ಎಂ.ಡಿ. ಒಕ್ಕುಂದ ಮಾತನಾಡಿ, ಮಕ್ಕಳ ಪ್ರತಿಭೆ ಬೆಳೆಸುವಲ್ಲಿ ಯುವ ಡಾನ್ಸ್ ಅಕಾಡೆಮಿಯ ಕಾರ್ಯ ಅಭಿನಂದನೀಯ. ಕ್ಯಾನ್ಸರ್ ಪೀಡಿತ ಮಕ್ಕಳಿಗೆ ನೆರವು ಹಾಗೂ ಪರಿಸರ ಕಾಳಜಿಯ ಕಾರ್ಯಕ್ರಮಗಳನ್ನು ನಡೆಸುತ್ತಿರುವುದು ಮಾದರಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸುಮಾರು 30 ಮಕ್ಕಳು ರಾಧಾ–ಕೃಷ್ಣ ವೇಷಭೂಷಣ, ಜಾನಪದ ನೃತ್ಯ, ಸಂಗೀತ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರಸ್ತುತಪಡಿಸಿದರು. ಅಕಾಡೆಮಿ ಸಂಸ್ಥಾಪಕ ರಮೇಶ್ ಪಾಟೀಲ್, ಗೌರವಾಧ್ಯಕ್ಷೆ ರತ್ನಮ್ಮ ಪಾಟೀಲ್, ನಿರ್ಣಾಯಕರಾದ ಸಂತೋಷ್ ಪಾಟೀಲ್ ಹಾಗೂ ಸುರಕ್ಷಾ ಹಿರೇಮಠ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವಿಜೇತರಿಗೆ ಬಹುಮಾನ ಹಾಗೂ ಪ್ರಮಾಣಪತ್ರ ವಿತರಿಸಲಾಯಿತು. ಭಾಗವಹಿಸಿದ ಎಲ್ಲ ಮಕ್ಕಳಿಗೂ ವಿವಿಧ ವಿಶೇಷ ಬಿರುದು ನೀಡಿ ಗೌರವಿಸಲಾಯಿತು.

## ಸಣ್ಣ ಸುದ್ದಿಗಳು

### ವಾಸಣ್ಣ ಕುರಡಗಿ ಅವರಿಗೆ ಸನ್ಮಾನ

ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷರಾಗಿ ನೇಮಕಗೊಂಡಿರುವ ವಾಸಣ್ಣ ಕುರಡಗಿ ಅವರನ್ನು ಡಿ.ಕೆ. ಹೊನ್ನಪ್ಪನವರ ಅಭಿಮಾನಿ ಬಳಗದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದು, ವಾಸಣ್ಣ ಕುರಡಗಿ ಅವರಿಗೆ ಅಭಿನಂದನೆ ಸಲ್ಲಿಸಿದರು.

### ಪಿಎಂ ಕಿಸಾನ್‌ಗೆ ಇ–ಕೆವೈಸಿ ಕಡ್ಡಾಯ

ವಿಜಯಸಾಕ್ಷಿ ಸುದ್ದಿ, ಗದಗ

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ (ಪಿಎಂ ಕಿಸಾನ್) ಯೋಜನೆಯಡಿ ಮುಂದಿನ ಕಂತಿನ ಹಣ ಪಡೆಯಲು ಫಲಾನುಭವಿ ರೈತರು ಬಯೋಮೆಟ್ರಿಕ್ ಅಥವಾ ಫೇಸ್ ಆಧಾರಿತ ಇ–ಕೆವೈಸಿ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ. ಇ–ಕೆವೈಸಿ ಬಾಕಿ ಇರುವ ರೈತರು ಕೂಡಲೇ ಪ್ರಕ್ರಿಯೆ ಪೂರ್ಣಗೊಳಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ತಿಳಿಸಿದ್ದಾರೆ.

ನಕಲಿ ಫಲಾನುಭವಿಗಳನ್ನು ತಡೆದು, ಅರ್ಹ ರೈತರಿಗೆ ಮಾತ್ರ ಯೋಜನೆಯ ಹಣ ಪಾರದರ್ಶಕವಾಗಿ ತಲುಪಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಈ ಕ್ರಮ ಕೈಗೊಂಡಿದೆ. ಇ–ಕೆವೈಸಿ ಪೂರ್ಣಗೊಳಿಸದಿದ್ದರೆ ಮುಂದಿನ ಕಂತಿನ ಹಣದಿಂದ ವಂಚಿತರಾಗುವ ಸಾಧ್ಯತೆ ಇದೆ ಎಂದು ಅವರು ತಿಳಿಸಿದ್ದಾರೆ.

ಪಿಎಂ ಕಿಸಾನ್ ಯೋಜನೆಯಡಿ ಪ್ರತಿ ನಾಲ್ಕು ತಿಂಗಳಿಗೊಮ್ಮೆ ₹2,000ರಂತೆ ವರ್ಷಕ್ಕೆ ಮೂರು ಕಂತುಗಳಲ್ಲಿ ಒಟ್ಟು ₹6,000ವನ್ನು ನೇರ ನಗದು ವರ್ಗಾವಣೆ (ಡಿಬಿಟಿ) ಮೂಲಕ ರೈತರ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತದೆ. ಯೋಜನೆಯ 24ನೇ ಕಂತಿನ ಹಣ ಅಕ್ಟೋಬರ್‌ನಲ್ಲಿ ಬಿಡುಗಡೆಯಾಗುವ ನಿರೀಕ್ಷೆಯಿದ್ದು, ಅದಕ್ಕೂ ಮುನ್ನ ಅರ್ಹ ಫಲಾನುಭವಿಗಳು ಇ–ಕೆವೈಸಿ ಪೂರ್ಣಗೊಳಿಸಬೇಕು ಎಂದು ತಿಳಿಸಿದ್ದಾರೆ.

ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ ಹಾಗೂ ಎನ್‌ಪಿಸಿಐ ಲಿಂಕ್ ಮಾಡಿದ್ದರೂ, ಈ ಬಾರಿ ಪ್ರತಿಯೊಬ್ಬ ಫಲಾನುಭವಿಯೂ ಬಯೋಮೆಟ್ರಿಕ್ ಅಥವಾ ಫೇಸ್ ಆಧಾರಿತ ಇ–ಕೆವೈಸಿ ಮಾಡಿಸಿಕೊಳ್ಳಬೇಕು. ಈ ಮೂಲಕ ಮೃತಪಟ್ಟ ಫಲಾನುಭವಿಗಳ ಖಾತೆಗೆ ಹಣ ವರ್ಗಾವಣೆಯಾಗುವುದನ್ನು ತಡೆಯುವ ಜತೆಗೆ ಅರ್ಹ ಫಲಾನುಭವಿಗಳನ್ನು ಗುರುತಿಸಲು ಕ್ರಮ ಕೈಗೊಳ್ಳಲಾಗಿದೆ.

ಈ ಹಿಂದೆ ಆಧಾರ್ ಒಟಿಪಿ ಆಧಾರಿತ ಇ–ಕೆವೈಸಿಗೆ ಅವಕಾಶವಿತ್ತು. ಆದರೆ ಮೃತ ಫಲಾನುಭವಿಗಳ ಖಾತೆಗಳಿಗೂ ಹಣ ವರ್ಗಾವಣೆಯಾದ ಪ್ರಕರಣಗಳು ಬೆಳಕಿಗೆ ಬಂದ ಹಿನ್ನೆಲೆಯಲ್ಲಿ ಒಟಿಪಿ ಆಧಾರಿತ ಇ–ಕೆವೈಸಿಗೆ ಕಡಿವಾಣ ಹಾಕಿ, ಬಯೋಮೆಟ್ರಿಕ್ ಅಥವಾ ಫೇಸ್ ಆಧಾರಿತ ದೃಢೀಕರಣಕ್ಕೆ ಆದ್ಯತೆ ನೀಡಲಾಗಿದೆ.

ರೈತರು ಸಾಮಾನ್ಯ ಸೇವಾ ಕೇಂದ್ರ (ಸಿಎಸ್‌ಸಿ), ಗ್ರಾಮ ಒನ್, ಕರ್ನಾಟಕ ಒನ್ ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಬಯೋಮೆಟ್ರಿಕ್ ಮೂಲಕ ಇ–ಕೆವೈಸಿ ಪೂರ್ಣಗೊಳಿಸಬಹುದು. ಫೇಸ್ ಆಧಾರಿತ ಇ–ಕೆವೈಸಿಗಾಗಿ ತಮ್ಮ ಗ್ರಾಮದ ವಿಎನ್‌ಓ, ನೋಡಲ್ ಅಧಿಕಾರಿ, ಕೃಷಿ ಸಖಿ ಅಥವಾ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಬಹುದು. ರೈತರು ಸ್ವತಃ ಪಿಎಂ ಕಿಸಾನ್ ಮೊಬೈಲ್ ಅಪ್ಲಿಕೇಶನ್ ಮೂಲಕವೂ ಇ–ಕೆವೈಸಿ ಮಾಡಿಕೊಳ್ಳಬಹುದು ಎಂದು ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ತಿಳಿಸಿದ್ದಾರೆ.

> ಮುಂದಿನ ಕಂತಿನ ಹಣ ಪಡೆಯಲು ಇ-ಕೆವೈಸಿ ಪೂರ್ಣಗೊಳಿಸುವುದು ಅತ್ಯಂತ ಅಗತ್ಯ. ಇ-ಕೆವೈಸಿ ಬಾಕಿ ಇರುವ ರೈತರು ಯಾವುದೇ ವಿಳಂಬ ಮಾಡದೆ ಬಯೋಮೆಟ್ರಿಕ್ ಅಥವಾ ಫೇಸ್ ಆಧಾರಿತ ಇ-ಕೆವೈಸಿ ಮಾಡಿಸಿಕೊಳ್ಳಬೇಕು.
> **– ಚೇತನಾ ಪಾಟೀಲ, ಜಂಟಿ ಕೃಷಿ ನಿರ್ದೇಶಕಿ**

### ಧಾರವಾಡದಲ್ಲಿ 19 ವರ್ಷದ ಯುವತಿ ನಾಪತ್ತೆ; ಪತ್ತೆಗೆ ಪೊಲೀಸರ ಮನವಿ

ವಿಜಯಸಾಕ್ಷಿ ಸುದ್ದಿ, ಧಾರವಾಡ

ನಗರದ ವಿದ್ಯಾಗಿರಿ ಪ್ರದೇಶದ 19 ವರ್ಷದ ಯುವತಿ ಸೆ.9ರಿಂದ ನಾಪತ್ತೆಯಾಗಿದ್ದು, ಆಕೆಯ ಪತ್ತೆಗೆ ಧಾರವಾಡ ಉಪನಗರ ಪೊಲೀಸರು ಸಾರ್ವಜನಿಕರ ಸಹಕಾರ ಕೋರಿದ್ದಾರೆ.

ಕಾಣೆಯಾದ ಯುವತಿಯನ್ನು ಲಕ್ಷ್ಮವ್ವ ತಂದೆ ಭೀಮಪ್ಪ ಮೊರಬ (19) ಎಂದು ಗುರುತಿಸಲಾಗಿದೆ. ಕೂಲಿ ಕೆಲಸ ಮಾಡುತ್ತಿದ್ದ ಈಕೆ, ಸೆ.9ರಂದು ಸಂಜೆ 7.30ರ ಸುಮಾರಿಗೆ ಧಾರವಾಡದ ಎಲ್‌ಐಸಿ ಕಚೇರಿ ಸಮೀಪದ ವಿದ್ಯಾದರ್ಶಿನಿ ಹೋಟೆಲ್‌ನಿಂದ ಮನೆಗೆ ತೆರಳುವುದಾಗಿ ಹೇಳಿ ಹೊರಟಿದ್ದಳು. ಆದರೆ ಮನೆಗೆ ವಾಪಸ್ ಬಾರದೆ ನಾಪತ್ತೆಯಾಗಿದ್ದಾಳೆ.

ಈ ಕುರಿತು ಯುವತಿಯ ತಾಯಿ ರೇಣವ್ವ ಅವರು ಧಾರವಾಡ ಉಪನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಅಪರಾಧ ಸಂಖ್ಯೆ 201/2026, ಮಹಿಳೆ ಕಾಣೆ ಪ್ರಕರಣ ದಾಖಲಿಸಿಕೊಂಡು ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಕಾಣೆಯಾದ ಯುವತಿಯ ಎತ್ತರ ಸುಮಾರು 4 ಅಡಿ 1 ಇಂಚು, ದುಂಡು ಮುಖ, ನೇರ ಮೂಗು, ಬೆಳ್ಳನೆಯ ಮೈಬಣ್ಣ ಹಾಗೂ ತೆಳ್ಳನೆಯ ಮೈಕಟ್ಟು ಹೊಂದಿದ್ದಾಳೆ. ತಲೆಯಲ್ಲಿ ಕಪ್ಪು ಬಣ್ಣದ ಕೂದಲಿದ್ದು, ನಾಪತ್ತೆಯಾಗುವ ವೇಳೆ ಚಾಕೊಲೇಟ್ ಹಾಗೂ ಬಿಳಿ ಬಣ್ಣದ ಚೂಡಿದಾರ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿದ್ದಳು. ಕನ್ನಡ, ತೆಲುಗು ಹಾಗೂ ಹಿಂದಿ ಭಾಷೆ ಮಾತನಾಡುತ್ತಾಳೆ ಎಂದು ಪೊಲೀಸರು ತಿಳಿಸಿದ್ದಾರೆ.

ಯುವತಿಯ ಕುರಿತು ಯಾವುದೇ ಮಾಹಿತಿ ದೊರೆತಲ್ಲಿ ಅಥವಾ ಆಕೆ ಎಲ್ಲಿಯಾದರೂ ಕಂಡುಬಂದಲ್ಲಿ ತಕ್ಷಣ ಹುಬ್ಬಳ್ಳಿ–ಧಾರವಾಡ ಪೊಲೀಸ್ ಕಂಟ್ರೋಲ್ ರೂಮ್ (0836–2233555/100) ಅಥವಾ ಧಾರವಾಡ ಉಪನಗರ ಪೊಲೀಸ್ ಠಾಣೆ (0836–2233511/9480802033)ಗೆ ಮಾಹಿತಿ ನೀಡುವಂತೆ ಪೊಲೀಸರು ಮನವಿ ಮಾಡಿದ್ದಾರೆ.

## ಸರ್ಕಾರದ ಅನುದಾನ ಸದುಪಯೋಗವಾಗಲಿ: ಎಚ್.ಕೆ. ಪಾಟೀಲ

# ಕಾಮಗಾರಿಗಳ ಗುಣಮಟ್ಟಕ್ಕೆ ಕಟ್ಟುನಿಟ್ಟಿನ ನಿಗಾ ಅಗತ್ಯ




ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಅನುದಾನದಲ್ಲಿ ಕೈಗೊಳ್ಳುವ ಅಭಿವೃದ್ಧಿ ಕಾಮಗಾರಿಗಳ ಗುಣಮಟ್ಟದ ಬಗ್ಗೆ ಎಂಜಿನಿಯರ್‌ಗಳು ಕಟ್ಟುನಿಟ್ಟಿನ ನಿಗಾವಹಿಸಬೇಕು. ಗುತ್ತಿಗೆದಾರರು ತಮಗೆ ಬೇಕಾದ ರೀತಿಯಲ್ಲಿ ಕಾಮಗಾರಿ ನಡೆಸದಂತೆ, ನಿಯಮಾನುಸಾರ ಕೆಲಸ ನಡೆಯುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಮಾಜಿ ಸಚಿವ, ಶಾಸಕ ಎಚ್.ಕೆ. ಪಾಟೀಲ ಹೇಳಿದರು.

ನಗರದ ಲೋಕೋಪಯೋಗಿ ಇಲಾಖೆ ಆವರಣದಲ್ಲಿ ಗದಗ ಜಿಲ್ಲಾ ಸಿವಿಲ್ ಗುತ್ತಿಗೆದಾರರ ಅಸೋಸಿಯೇಶನ್ (ರಿ.) ಸಹಯೋಗದಲ್ಲಿ ಲೋಕೋಪಯೋಗಿ ಇಲಾಖೆ ಹಾಗೂ ಪಂಚಾಯತ್ ಎಂಜಿನಿಯರಿಂಗ್ ವಿಭಾಗದ ವತಿಯಿಂದ ಮಂಗಳವಾರ ಆಯೋಜಿಸಿದ್ದ ಸರ್ ಎಂ. ವಿಶ್ವೇಶ್ವರಯ್ಯ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರಸ್ತೆ, ಸೇತುವೆ ಸೇರಿದಂತೆ ಯಾವುದೇ ಅಭಿವೃದ್ಧಿ ಕಾಮಗಾರಿಯ ಗುಣಮಟ್ಟ ಪರಿಶೀಲಿಸುವಾಗ ಅಗತ್ಯ ಅಳತೆ, ದಾಖಲೆ ಹಾಗೂ ತಾಂತ್ರಿಕ ಮಾನದಂಡಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಕೇವಲ ಕಾಗದದ ಮೇಲಿನ ಪರಿಶೀಲನೆಗೆ ಸೀಮಿತವಾಗದೆ, ಸ್ಥಳದಲ್ಲೇ ಕಾಮಗಾರಿಯನ್ನು ಪರಿಶೀಲಿಸಿ ಲೋಪ ಕಂಡುಬಂದರೆ ತಕ್ಷಣ ಸರಿಪಡಿಸುವ ಕ್ರಮ ಕೈಗೊಳ್ಳಬೇಕು ಎಂದು ಎಚ್.ಕೆ. ಪಾಟೀಲ ಸೂಚಿಸಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡ ಮಾಜಿ ಸಚಿವ, ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಕಾಮಗಾರಿಗಳ ಗುಣಮಟ್ಟ ನೇರವಾಗಿ ಜನಪ್ರತಿನಿಧಿಗಳ ಮೇಲೂ ಪರಿಣಾಮ ಬೀರುತ್ತದೆ. ಉತ್ತಮ ಕಾಮಗಾರಿಗೆ ಎಲ್ಲರಿಗೂ ಶ್ರೇಯಸ್ಸು ದೊರೆಯುತ್ತದೆ, ಕಳಪೆ ಕಾಮಗಾರಿ ನಡೆದರೆ ಜನರು ಜನಪ್ರತಿನಿಧಿಗಳನ್ನೇ ಪ್ರಶ್ನಿಸುತ್ತಾರೆ. ಹೀಗಾಗಿ ಎಂಜಿನಿಯರ್‌ಗಳು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಿ, ಸರ್ಕಾರದ ಹಣ ಸದುಪಯೋಗವಾಗುವಂತೆ ನೋಡಿಕೊಳ್ಳಬೇಕು ಎಂದರು.

ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರ ಕೋಟ್ಯಂತರ ರೂಪಾಯಿ ಅನುದಾನ ನೀಡುತ್ತಿದೆ. ಬಿಡುಗಡೆಯಾದ ಅನುದಾನವನ್ನು ಸಕಾಲದಲ್ಲಿ ಸದ್ಬಳಕೆ ಮಾಡಿಕೊಂಡು ಗುಣಮಟ್ಟದ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವುದು ಮುಖ್ಯ. ಕಾಮಗಾರಿ ಆರಂಭಿಸುವ ಮುನ್ನ ಸೂಕ್ತ ನಕ್ಷೆ, ಅಳತೆ, ತಾಂತ್ರಿಕ ಪರಿಶೀಲನೆ ಹಾಗೂ ಸಮರ್ಪಕ ಯೋಜನೆ ಸಿದ್ಧಪಡಿಸಬೇಕು. ಅನುದಾನ ಬಿಡುಗಡೆಯಾದ ಬಳಿಕ ಕಾಮಗಾರಿ ವಿಳಂಬವಾಗದಂತೆ ಕ್ರಮವಹಿಸಿ, ಸಾರ್ವಜನಿಕರಿಗೆ ಯೋಜನೆಗಳ ಪ್ರಯೋಜನ ಶೀಘ್ರ ದೊರೆಯುವಂತೆ ಮಾಡಬೇಕು ಎಂದು ಹೇಳಿದರು.

ಎಂಜಿನಿಯರಿಂಗ್ ಕ್ಷೇತ್ರದಲ್ಲಿ ದೇಶವು ಗಣನೀಯ ಪ್ರಗತಿ ಸಾಧಿಸಿದ್ದು, ಆಧುನಿಕ ತಂತ್ರಜ್ಞಾನದಿಂದ ಬೃಹತ್ ಸೇತುವೆಗಳು ಸೇರಿದಂತೆ ಹಲವು ನಿರ್ಮಾಣ ಕಾರ್ಯಗಳು ಸಾಧ್ಯವಾಗಿವೆ. ಇದೇ ತಂತ್ರಜ್ಞಾನವನ್ನು ಸ್ಥಳೀಯ ಅಭಿವೃದ್ಧಿ ಕಾಮಗಾರಿಗಳಲ್ಲೂ ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಸಿ.ಸಿ. ಪಾಟೀಲ ಹೇಳಿದರು.


ಕಾರ್ಯಕ್ರಮದ ಆರಂಭದಲ್ಲಿ ಲೋಕೋಪಯೋಗಿ ಇಲಾಖೆ ಆವರಣದಲ್ಲಿರುವ ಸರ್ ಎಂ. ವಿಶ್ವೇಶ್ವರಯ್ಯ ಅವರ ಪುತ್ಥಳಿಗೆ ಯೂತ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಮಾಲಾರ್ಪಣೆ ಮಾಡಿದರು. ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಉಪಸ್ಥಿತರಿದ್ದರು.

ಮುಖ್ಯ ಅಭಿಯಂತರ ಶಿವಾನಂದ ನಾಯಕ, ಕಾರ್ಯಪಾಲಕ ಅಭಿಯಂತರರಾದ ಉಮೇಶ ನಾಯಕ ಹಾಗೂ ಆರ್.ಬಿ. ಮರಾಠೆ, ಹಿರಿಯ ಭೂವಿಜ್ಞಾನಿ ಉಮೇಶ ಬಗರಿ, ಗದಗ ಜಿಲ್ಲಾ ಸಿವಿಲ್ ಗುತ್ತಿಗೆದಾರರ ಅಸೋಸಿಯೇಶನ್ ಅಧ್ಯಕ್ಷ ಎಸ್.ಕೆ. ಪಾಟೀಲ ಸೇರಿದಂತೆ ಪದಾಧಿಕಾರಿಗಳು ಹಾಗೂ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು. ಬಾಹುಬಲಿ ಜೈನರ ಸ್ವಾಗತಿಸಿ ನಿರೂಪಿಸಿದರು. ಪ್ರಕಾಶ ಮುದಗಲ್ಲ ಪ್ರಾಸ್ತಾವಿಕವಾಗಿ ಮಾತನಾಡಿದರು. ವಂದನಾರ್ಪಣೆಯೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು.

> ಅಭಿವೃದ್ಧಿ ಕಾಮಗಾರಿಗಳ ಗುಣಮಟ್ಟದಲ್ಲಿ ಯಾವುದೇ ರಾಜಿ ಇರಬಾರದು. ಸರ್ಕಾರದ ಹಣ ಜನರ ಹಣವಾಗಿದ್ದು, ಅದು ಸಮರ್ಪಕವಾಗಿ ಬಳಕೆಯಾಗುವಂತೆ ಎಂಜಿನಿಯರ್‌ಗಳು ಹಾಗೂ ಗುತ್ತಿಗೆದಾರರು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು.
> **– ಎಚ್.ಕೆ. ಪಾಟೀಲ, ಶಾಸಕ**

## ರೈತರ ಶ್ರಮಕ್ಕೆ ಗೌರವ ಸಲ್ಲಿಸಿದ ಎಪಿಎಂಸಿ ವರ್ತಕರು

# ನವಧಾನ್ಯಗಳ ಪೂಜೆ; ಮಳೆಗಾಗಿ ಪ್ರಾರ್ಥನೆ



ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಾನಯೋಗಿ ಶ್ರೀ ಪಂ. ಪಂಚಾಕ್ಷರ ಗವಾಯಿಗಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ) ಪ್ರಾಂಗಣದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪಿಸಿರುವ ಗಣೇಶ ಮೂರ್ತಿಗೆ ಎರಡನೇ ದಿನವಾದ ಮಂಗಳವಾರ ದಲಾಲ ವರ್ತಕರ ಸಂಘದ ವತಿಯಿಂದ ರೈತಪರ ವಿಶೇಷ ಪೂಜೆ ನೆರವೇರಿಸಲಾಯಿತು. ಗಣೇಶನ ಮೂರ್ತಿಯ ಮುಂದೆ ಜಿಲ್ಲೆಯ ರೈತರು ಶ್ರಮವಹಿಸಿ ಬೆಳೆದ ಜೋಳ, ಗೋಧಿ, ಹೆಸರು, ತೊಗರಿ, ಕಡಲೆ, ಎಳ್ಳು, ಸೂರ್ಯಕಾಂತಿ ಸೇರಿದಂತೆ ನವಧಾನ್ಯಗಳನ್ನು ಇಟ್ಟು ವಿಶೇಷ ಪೂಜೆ ಸಲ್ಲಿಸಲಾಯಿತು. ಕೃಷಿ ಸಂಸ್ಕೃತಿ ಹಾಗೂ ರೈತರ ಶ್ರಮಕ್ಕೆ ಗೌರವ ಸಲ್ಲಿಸುವ ಉದ್ದೇಶದಿಂದ ನವಧಾನ್ಯಗಳ ನೈವೇದ್ಯ ಸಮರ್ಪಿಸಲಾಯಿತು. ಜಿಲ್ಲೆಯಲ್ಲಿ ನಿರೀಕ್ಷಿತ ಮಳೆಯಾಗದೆ ಕೃಷಿ ಚಟುವಟಿಕೆಗಳು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ, ಉತ್ತಮ ಮಳೆ ಹಾಗೂ ರೈತರ ಸಮೃದ್ಧಿಗಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಎಪಿಎಂಸಿ ದಲಾಲ ಸಂಘದ ಪದಾಧಿಕಾರಿಗಳಾದ ಮಹಾದೇವಪ್ಪ ಗೌರಿಪುರ, ಶಶಿಧರ ಭೀರನವರ, ತಿಮ್ಮಣ್ಣ ಕೋನರೆಡ್ಡಿ, ಹುಚ್ಚಪ್ಪ ಶಹಪೂರ, ಮಂಜುನಾಥ ಬೇಲೆರಿ, ಸಿದ್ಧಣ್ಣ ಮಾರನಬಸರಿ, ಪ್ರಕಾಶ ಉಗಲಾಟದ, ನಿತಿನ್ ವಾರಕರ, ಮಂಜುನಾಥ ಹುಚ್ಚಣ್ಣವರ, ಶರಣಪ್ಪ ಕುರಡಗಿ, ಸೋಮನಗೌಡ ಪಾಟೀಲ ಹಾಗೂ ಶಿವಯ್ಯ ನಾಲ್ವತ್ವಾಡಮಠ ಸೇರಿದಂತೆ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ಪದಾಧಿಕಾರಿಗಳು, ವರ್ತಕರು, ರೈತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

> ವರಸಿದ್ಧಿ ವಿನಾಯಕನ ಕೃಪೆಯಿಂದ ಗದಗ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿ, ರೈತರ ಬೆಳೆಗಳು ನಳನಳಿಸಲಿ. ಬರಗಾಲದ ಛಾಯೆ ದೂರವಾಗಿ ಜಿಲ್ಲೆಯ ರೈತರಿಗೆ ಸಮೃದ್ಧಿ ದೊರೆಯಲಿ.
> **– ಮುರಘರಾಜೇಂದ್ರ ಬಡ್ನಿ, ಅಧ್ಯಕ್ಷರು, ಎಪಿಎಂಸಿ ದಲಾಲ ವರ್ತಕರ ಸಂಘ**

## ಆರೋಗ್ಯದ ಕಾಳಜಿಯ ಜಾಲಿಹಾಳಗೆ 70ರ ಸಂಭ್ರಮ



ವಿಜಯಸಾಕ್ಷಿ ಸುದ್ದಿ, ಗದಗ

ಅರುಣೋದಯ ವಾಯುವಿಹಾರ ಸಂಘದ ಅಧ್ಯಕ್ಷ ಪ್ರೊ. ಬಿ.ಆರ್. ಜಾಲಿಹಾಳ ಅವರ 70ನೇ ಹುಟ್ಟುಹಬ್ಬವನ್ನು ಸಂಘದ ಸದಸ್ಯರು ಸಂಭ್ರಮದಿಂದ ಆಚರಿಸಿ ಸನ್ಮಾನಿಸಿದರು.

ವಿಭೂತಿ ಮಾಸಪತ್ರಿಕೆಯ ಸಂಪಾದಕ ಅಂದಾನೆಪ್ಪ ವಿಭೂತಿ ಹಾಗೂ ಸ್ಥಳೀಯ ತೋಂಟದಾರ್ಯ ಮಠದ ಚನ್ನಯ್ಯ ಹಿರೇಮಠ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಅಂದಾನೆಪ್ಪ ವಿಭೂತಿ ಅವರು ಜಾಲಿಹಾಳ ಅವರನ್ನು ಸನ್ಮಾನಿಸಿ, ಸರಳ–ಸಜ್ಜನ ವ್ಯಕ್ತಿತ್ವದ ಅವರು ನಿತ್ಯ ವ್ಯಾಯಾಮ ಮತ್ತು ವಾಯುವಿಹಾರದ ಮೂಲಕ ಆರೋಗ್ಯ ಕಾಪಾಡಿಕೊಂಡಿದ್ದಾರೆ. ನಿವೃತ್ತಿಯ ಬಳಿಕ ತಮ್ಮ ಹುಟ್ಟೂರಾದ ಕಣಗಿನಹಾಳದಲ್ಲಿ ಹಲವು ರಚನಾತ್ಮಕ ಕಾರ್ಯಗಳಲ್ಲಿ ತೊಡಗಿಸಿಕೊಂಡು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ ಎಂದು ಹೇಳಿದರು.

ಚನ್ನಯ್ಯ ಹಿರೇಮಠ ಮಾತನಾಡಿ, ಎಲ್ಲರೂ ಆರೋಗ್ಯದ ಕಡೆಗೆ ಗಮನಹರಿಸಿ ನಿತ್ಯ ವಾಯುವಿಹಾರ ಮಾಡುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಜಾಲಿಹಾಳ ಅವರಿಗೆ ಸುಖ, ಸಂತೋಷ, ಸಮೃದ್ಧಿ ಹಾಗೂ ಆಯುರಾರೋಗ್ಯ ಲಭಿಸಲಿ ಎಂದು ಹಾರೈಸಿದರು.

ಸಂಘದ ಸದಸ್ಯರಾದ ಡಾ. ಟಿ.ಎನ್. ಗೋಡಿ, ಆರ್.ಎಸ್. ಕುಂದಗೋಳ ಹಾಗೂ ಬಿ.ಬಿ. ಮಾಲಗಿತ್ತಿ ಸೇರಿದಂತೆ ಹಲವರು ಮಾತನಾಡಿ ಶುಭಾಶಯ ಕೋರಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಪ್ರೊ. ಬಿ.ಆರ್. ಜಾಲಿಹಾಳ, ಒತ್ತಡರಹಿತ ಜೀವನ, ಹಿತ–ಮಿತ ವ್ಯಾಯಾಮ ಹಾಗೂ ವಾಯುವಿಹಾರವೇ ತಮ್ಮ ಆರೋಗ್ಯದ ಗುಟ್ಟು ಎಂದರು. ಸ್ನೇಹಿತರೆಲ್ಲ ಸೇರಿ 70ನೇ ಹುಟ್ಟುಹಬ್ಬ ಆಚರಿಸಿರುವುದು ಸಂತಸ ತಂದಿದೆ. ಕಾರ್ಯಕ್ರಮ ಆಯೋಜಿಸಿ ಶುಭ ಕೋರಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಎಂ.ಎಫ್. ಡೋಣಿ, ಜಿ.ಬಿ. ಡೊಣ್ಣಿ, ಅಶೋಕ ವಡವಡಗಿ, ಆರ್.ಜಿ. ಕುಲಕರ್ಣಿ, ಎಂ.ಎಫ್. ಕಲಕಂಬಿ, ಜಗದೀಶ ಜಾಲಿ, ಜಯಣ್ಣ ಪಾಟೀಲ, ಸಿದ್ದಲಿಂಗಪ್ಪ ಪಟ್ಟಣಶೆಟ್ಟಿ, ಇಕ್ಬಾಲ್ ಮುಲ್ಲಾ, ಎಸ್.ಬಿ. ಸಜ್ಜನರ, ಎಸ್.ಎಂ. ಯಂಡಿಗೇರಿ, ಎಂ.ಬಿ. ಕರಿಬಿಷ್ಠಿ, ಎ.ಎಸ್. ಕೊಡಗಲಿ, ಆರ್.ಎಂ. ಜಾಗನೂರ ಹಾಗೂ ವಿ.ಎಸ್. ರಾಠೋಡ ಸೇರಿದಂತೆ ಸಂಘದ ಸದಸ್ಯರು ಉಪಸ್ಥಿತರಿದ್ದರು.

ಪ್ರೊ. ಎಂ.ಸಿ. ವಗ್ಗಿ ಸ್ವಾಗತಿಸಿ ನಿರೂಪಿಸಿದರು. ಪ್ರಧಾನ ಕಾರ್ಯದರ್ಶಿ ಎಚ್.ಎನ್. ಚಿಗರಿ ವಂದಿಸಿದರು.

## ವೀರಾಗ್ರಣಿ ಪ್ರಶಸ್ತಿಗಳೊಂದಿಗೆ ಹಲವು ವಿಭಾಗಗಳಲ್ಲಿ ಮಿಂಚಿದ ವಿದ್ಯಾರ್ಥಿಗಳು

# ಇನಾಮತಿ ಪ್ರೌಢಶಾಲೆಗೆ ಕ್ರೀಡಾ ಕಿರೀಟ



ವಿಜಯಸಾಕ್ಷಿ ಸುದ್ದಿ, ಕುರ್ತಕೋಟಿ

ಗದಗ ತಾಲೂಕಿನ ಬೂದೀಶ್ವರ ಹೊಸಳ್ಳಿ ಗ್ರಾಮದ ಬೂದೀಶ್ವರ ವಿದ್ಯಾಪೀಠದಲ್ಲಿ ನಡೆದ 2026–27ನೇ ಸಾಲಿನ ಹುಲಕೋಟಿ ವಲಯ ಮಟ್ಟದ ಕ್ರೀಡಾಕೂಟದಲ್ಲಿ ಕುರ್ತಕೋಟಿಯ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಮನೋಹರ ಅಮರಪ್ಪ ಇನಾಮತಿ ಪ್ರೌಢಶಾಲೆ ಗಮನಾರ್ಹ ಸಾಧನೆ ಮಾಡಿದೆ.

ಬಾಲಕಿಯರ ವಿಭಾಗದಲ್ಲಿ ಶಿಲ್ಪಾ ಕಂಬಾರ 400, 1500 ಹಾಗೂ 3000 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಪಡೆದು ವೀರಾಗ್ರಣಿ ಪ್ರಶಸ್ತಿ ಪಡೆದಿದ್ದಾರೆ. ಸವಿತಾ ಶಿ. ಕಾಬಳ್ಳಿ ಗುಂಡು ಎಸೆತ, ಜಾವೆಲಿನ್ ಎಸೆತ ಹಾಗೂ ಸರಪಳಿ ಗುಂಡು ಎಸೆತದಲ್ಲಿ ಪ್ರಥಮ ಸ್ಥಾನ ಪಡೆದು ವೀರಾಗ್ರಣಿ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಅಪೂರ್ವ ದಿಂಡೆನವರ್ ಉದ್ದ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ.

ಬಾಲಕಿಯರ ಗುಂಪು ವಿಭಾಗದಲ್ಲಿ ವಾಲಿಬಾಲ್ ಹಾಗೂ ಥ್ರೋಬಾಲ್‌ನಲ್ಲಿ ಪ್ರಥಮ ಸ್ಥಾನ ಗಳಿಸಿದೆ. 14 ವರ್ಷದೊಳಗಿನ ಬಾಲಕಿಯರ ವಿಭಾಗದಲ್ಲಿ ಲಕ್ಷ್ಮೀ ಪೂಜಾರ 100 ಮೀಟರ್ ಓಟ, ಗುಂಡು ಎಸೆತ ಹಾಗೂ ಹರ್ಡಲ್ಸ್‌ನಲ್ಲಿ ಪ್ರಥಮ ಸ್ಥಾನ ಪಡೆದು ವೀರಾಗ್ರಣಿ ಪ್ರಶಸ್ತಿ ಪಡೆದಿದ್ದಾರೆ. ಇದೇ ವಿಭಾಗದ ವಾಲಿಬಾಲ್ ಹಾಗೂ ಥ್ರೋಬಾಲ್ ತಂಡಗಳು ಪ್ರಥಮ ಸ್ಥಾನ ಪಡೆದಿವೆ.

ಬಾಲಕರ ವಿಭಾಗದಲ್ಲಿ ಆನಂದ ಅಸುಂಡಿ ಉದ್ದ ಜಿಗಿತ, ಎತ್ತರ ಜಿಗಿತ ಹಾಗೂ ತ್ರಿವಿಧ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆದು ವೀರಾಗ್ರಣಿ ಪ್ರಶಸ್ತಿ ಪಡೆದಿದ್ದಾರೆ. ಚೇತನ್ ಉಗಲಾಟ 100 ಮೀಟರ್ ಓಟದಲ್ಲಿ ಪ್ರಥಮ, ವಿನೋದ ತಂತ್ರಿ ಸರಪಳಿ ಗುಂಡು ಎಸೆತದಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ. ತರುಣ ಜಕ್ಕಲಿ, ಸಮರ್ಥ ವಡ್ಡರ, ಶಿವಾನಂದ ನಾಗರಳ್ಳಿ, ಕಾರ್ತಿಕ್ ಇಳಿಗೇರ ಹಾಗೂ ಇರ್ಫಾನ್ ಅಣ್ಣಿಗೇರಿ ವಿವಿಧ ಸ್ಪರ್ಧೆಗಳಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ಬಾಲಕರ ಥ್ರೋಬಾಲ್ ಹಾಗೂ ರಿಲೇ ಓಟದಲ್ಲಿ ಪ್ರಥಮ, ವಾಲಿಬಾಲ್‌ನಲ್ಲಿ ದ್ವಿತೀಯ ಸ್ಥಾನ ಲಭಿಸಿದೆ.

ವಿವಿಧ ವೈಯಕ್ತಿಕ ಹಾಗೂ ಗುಂಪು ವಿಭಾಗಗಳಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳು ಮುಂದಿನ ಹಂತದ ಸ್ಪರ್ಧೆಗಳಿಗೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಆರ್.ಎಂ. ಮೂಲಿಮನಿ, ಆಡಳಿತಾಧಿಕಾರಿ ಆರ್.ಎಸ್. ಪಾಟೀಲ, ಸ್ಥಾನಿಕ ಆಡಳಿತ ಮಂಡಳಿ ಅಧ್ಯಕ್ಷ ಯು.ವಿ. ಬೆಟಗೇರಿ, ಸದಸ್ಯ ಅಪ್ಪಣ್ಣ ಇನಾಮತಿ, ಶಾಲೆಯ ಮುಖ್ಯೋಪಾಧ್ಯಾಯ ಜಂಬುನಾಥ ಹರಿವಾಣ, ದೈಹಿಕ ಶಿಕ್ಷಕ ಮಂಜುನಾಥ ಅಂಗಡಿ ಹಾಗೂ ಸಿಬ್ಬಂದಿ ಅಭಿನಂದನೆ ಸಲ್ಲಿಸಿದ್ದಾರೆ.

> ವಿದ್ಯಾರ್ಥಿಗಳ ಕ್ರೀಡಾ ಪ್ರತಿಭೆಗೆ ಸೂಕ್ತ ತರಬೇತಿ ಹಾಗೂ ಪ್ರೋತ್ಸಾಹ ನೀಡಿದರೆ ಇನ್ನಷ್ಟು ದೊಡ್ಡ ಮಟ್ಟದಲ್ಲಿ ಸಾಧನೆ ಮಾಡಲು ಸಾಧ್ಯ. ಈ ಗೆಲುವು ವಿದ್ಯಾರ್ಥಿಗಳ ಪರಿಶ್ರಮಕ್ಕೆ ದೊರೆತ ಫಲ.
> **– ಜಂಬುನಾಥ ಹರಿವಾಣ, ಮುಖ್ಯೋಪಾಧ್ಯಾಯರು**

## ಸಂವಿಧಾನ, ಪ್ರಜಾಪ್ರಭುತ್ವದ ಮೌಲ್ಯ ಅರಿಯಲಿ: ಚಂದ್ರು ಲಮಾಣಿ

# ಯುವಕರೇ ದೇಶದ ಸಂಪತ್ತು



ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯುವಕರು ದೇಶದ ಸಂಪತ್ತು. ವಿದ್ಯಾರ್ಥಿ ಜೀವನದಿಂದಲೇ ನಾಯಕತ್ವದ ಗುಣಗಳನ್ನು ಬೆಳೆಸಿಕೊಂಡು ದೇಶ, ನಾಡು, ನುಡಿ, ನೆಲ, ಭಾಷೆ ಹಾಗೂ ಸಂವಿಧಾನದ ಬಗ್ಗೆ ಅಭಿಮಾನ ಬೆಳೆಸಿಕೊಳ್ಳಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಪಟ್ಟಣದ ಪುರಸಭೆ ಕಲಾ ಮಹಾವಿದ್ಯಾಲಯದಲ್ಲಿ ತಾಲೂಕು ಆಡಳಿತ, ಪುರಸಭೆ, ಶಿಕ್ಷಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಮಂಗಳವಾರ ಆಯೋಜಿಸಿದ್ದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಾಗೂ ಯುವ ಸಂಸತ್ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ಭಾರತದ ಸ್ವಾತಂತ್ರ್ಯ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆ ವಿಶ್ವಮಾನ್ಯವಾಗಿದೆ. ದೇಶದ ಆಡಳಿತ ಸಂವಿಧಾನದ ಆಶಯ ದಂತೆ ನಡೆಯಬೇಕು. ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗ ವ್ಯವಸ್ಥೆಗಳು ಸಂವಿಧಾನದ ಚೌಕಟ್ಟಿನಲ್ಲಿಯೇ ಕಾರ್ಯನಿರ್ವಹಿಸಬೇಕು. ಪ್ರತಿಯೊಬ್ಬರೂ ಸಂವಿಧಾನದ ತತ್ವಗಳು ಮತ್ತು ಮೌಲ್ಯಗಳನ್ನು ಅರಿತು, ಅದರ ಆಶಯದಂತೆ ಬದುಕಬೇಕು ಎಂದರು. ಯುವ ಸಂಸತ್‌ನಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಸಂಸದೀಯ ವ್ಯವಸ್ಥೆಯ ಕುರಿತು ಅರಿವು ಮೂಡಿಸುವುದರ ಜತೆಗೆ ಚರ್ಚೆ, ವಿಚಾರ ಮಂಡನೆ, ನಾಯಕತ್ವ ಹಾಗೂ ನಿರ್ಧಾರ ಕೈಗೊಳ್ಳುವ ಸಾಮರ್ಥ್ಯ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು. ತಹಸೀಲ್ದಾರ್ ಧನಂಜಯ ಎಂ. ಮಾತನಾಡಿ, ಯುವಕರು ದುಶ್ಚಟಗಳಿಂದ ದೂರವಿದ್ದು, ಶಿಸ್ತು, ಸಂಸ್ಕಾರ ಹಾಗೂ ಉತ್ತಮ ಚಿಂತನೆಗಳನ್ನು ಬೆಳೆಸಿಕೊಳ್ಳಬೇಕು. ಸಮಾಜದ ಒಳಿತಿಗಾಗಿ ಕಾರ್ಯನಿರ್ವಹಿಸುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಬದ್ಧರಾಗಬೇಕು. ಭವಿಷ್ಯದಲ್ಲಿ ದೇಶದ ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಳ್ಳಲು ಇಂತಹ ಕಾರ್ಯಕ್ರಮಗಳು ಅಗತ್ಯ ಎಂದರು. ಗ್ಯಾರಂಟಿ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಮಂಜುಳಾ ಹಕಾರಿ, ಸಿಪಿಐ ಬಿ.ವಿ. ನ್ಯಾಮಗೌಡ್ರ, ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಗೋಪಾಲ ನಾಯಕ, ಪಿಎಸ್‌ಐ ಟಿ.ಕೆ. ರಾಠೋಡ, ಇಸಿಓ ರಾಘವೇಂದ್ರ ಜೋಶಿ, ಪ್ರಾಚಾರ್ಯ ನಾಗರಾಜ ಕಳ್ಳಿಮನಿ ಸೇರಿದಂತೆ ಉಪನ್ಯಾಸಕರು, ಸಮಾಜ ಕಲ್ಯಾಣ ಇಲಾಖೆ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka